ಸಂಪುಟ: 4 ಸಂಚಿಕೆ 97 ಪುಟ: 4 ₹: 4 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Read,Share and Follow - www.belagavivaradi.com
Vol-04 Issue: 97 Wednesday, 31, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ನೂತನ ಶಿಕ್ಷಣ ನೀತಿ ಜಾರಿ ಇಲ್ಲ: ಜಾರಕಿಹೊಳಿ



ಬೆಳಗಾವಿ: 'ಕೇಂದ್ರ ಸರ್ಕಾರ ರೂಪಿಸಿದ ನೂತನ ಶಿಕ್ಷಣ ನೀತಿಯನ್ನು ನಾವು ಹಿಂದೆಯೂ ಒಪ್ಪಿರಲಿಲ್ಲ. ಈಗಲೂ ಒಪ್ಪುವುದಿಲ್ಲ' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಕೇಸರೀಕರಣ ಆಗಬಾರದು. ಅದರ ಬಗ್ಗೆ ಶಿಕ್ಷಣ ತಜ್ಞರು, ಪರಿಣತರು ಕೂಡ ತಕರಾರು ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ಇದೇ ಅಭಿಪ್ರಾಯ ಪಟ್ಟಿದ್ದಾರೆ. ತಜ್ಞರ ಹೊಸ ಸಮಿತಿ ರಚಿಸಿ, ಪರಾಮರ್ಶೆ ಮಾಡಲಾಗುವುದು. ಅಲ್ಲಿ ಬರುವ ಅಭಿಪ್ರಾಯದ ಮೇಲೆ ಹೆಜ್ಜೆ ಇಡಲಾಗುವುದು' ಎಂದೂ ಅವರು ನಗರದಲ್ಲಿ ಮಂಗಳವಾರ ಮಾಧ್ಯದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಸುವರ್ಣಸೌಧಕ್ಕೆ ಕಚೇರಿ ಸ್ಥಳಾಂತರ ಇಲ್ಲ: 'ಬೆಳಗಾವಿಯ ಸುವರ್ಣ ವಿಧಾನಸೌಧಕ್ಕೆ ರಾಜ್ಯಮಟ್ಟದ ಕಚೇರಿಗಳನ್ನು ಸ್ಥಳಾಂತರ ಮಾಡುವುದು ಅವೈಜ್ಞಾನಿಕ, ಅನನುಕೂಲ ಕೂಡ. ನಾನು ವಿರೋಧ ಪಕ್ಷದಲ್ಲಿದ್ದಾಗಲೂ ಇದನ್ನು ವಿರೋಧಿಸಿದ್ದೇನೆ. ಈಗಲೂ ಅದಕ್ಕೆ ಸಹಮತ ಇಲ್ಲ' ಎಂದೂ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. 'ಒಂದು ಇಲಾಖೆಯನ್ನು ಇಲ್ಲಿಗೆ ತಂದರೆ ಇನ್ನೊಂದು ಇಲಾಖೆ ಬೆಂಗಳೂರಿನಲ್ಲಿ ಉಳಿಯುತ್ತದೆ. ಒಬ್ಬ ಅಧಿಕಾರಿಯ ಸಹಿಗೆ ಬೆಳಗಾವಿಗೆ, ಇನ್ನೊಬ್ಬರ ಸಹಿಗೆ ಬೆಂಗಳೂರಿಗೆ ಅಲೆಯಬೇಕಾಗುತ್ತದೆ. ಇದು ಸರಿಯಾದ ಕ್ರಮವಲ್ಲ. ಸುವರ್ಣ ಸೌಧವನ್ನು ಪೂರ್ಣಪ್ರಮಾಣದಲ್ಲಿ ಬಳಸಿಕೊಳ್ಳಬೇಕಾದರೆ ಬೇರೆ ಏನಾದರೂ ಕೆಲಸ ಮಾಡುತ್ತೇವೆ' ಎಂದರು. 'ಸುವರ್ಣ ಸೌಧದಲ್ಲಿ ಆರು ತಿಂಗಳಿಗೆ ಎರಡು ಬಾರಿ ಕ್ಯಾಬಿನೆಟ್ ಸಭೆ ಕರೆಯುವ ಬಗ್ಗೆ ಚಿಂತನೆ ನಡೆದಿದೆ' ಎಂದೂ ಅವರು ಹೇಳಿದರು. 'ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಹಂಚಿಕೆ ವಿಚಾರದಲ್ಲಿ ಅಕ್ರಮ ನಡಿದಿದೆ ಎಂಬ ಆರೋಪಗಳು ಕೇಳಿಬಂದಿವೆ. ರೂ 100 ಕೋಟಿಗೂ ಅಧಿಕ ನಷ್ಟವಾಗಿದೆ.

ಈ ಪ್ರಕರಣವನ್ನು ಸುಮ್ಮನೇ ಬಿಡುವುದಿಲ್ಲ. 'ಬುಡಾ' ಅಕ್ರಮದ ಬಗ್ಗೆ ಪ್ರತ್ಯೇಕ ಸಭೆ ಮಾಡಿ, ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸುತ್ತೇವೆ' ಎಂದರು.

ಜಿಲ್ಲೆ ವಿಭಜನೆಗೆ ಈಗಲೂ ಬದ್ಧ: 'ಬೆಳಗಾವಿ ಜಿಲ್ಲೆ ಪ್ರಾದೇಶಿಕವಾಗಿ ಬಹಳ ದೊಡ್ಡದಿದೆ. ಆಡಳಿತದ ದೃಷ್ಟಿಯಿಂದ ಇದು ಸರಿಯಲ್ಲ. ಜಿಲ್ಲೆ ವಿಭಜನೆ ಆಗಬೇಕು ಎಂದು ನಾನು ಹಿಂದೆಯೂ ಹೇಳಿದ್ದೆ. ಈಗಲೂ ಅಷ್ಟೇ; ಆಡಳಿತ ಸುಗಮವಾಗಲು, ಅಭಿವೃದ್ಧಿ ದೃಷ್ಟಿಯಿಂದ ಗೋಕಾಕ ಹಾಗೂ ಚಿಕ್ಕೋಡಿ ಕೇಂದ್ರವಾಗಿ ಇನ್ನೆರಡು ಜಿಲ್ಲೆ ರಚನೆ ಆಗಬೇಕಿದೆ' ಎಂದೂ ಸತೀಶ ಹೇಳಿದರು. ಸಚಿವರ ಮಾತಿನ ಬೆನ್ನಿಗೇ ಮಾತನಾಡಿದ ಶಾಸಕ ಮಹಾಂತೇಶ ಕೌಜಲಗಿ, 'ಬೈಲಹೊಂಗಲ ಕೇಂದ್ರವಾಗಿಯೂ ಹೊಸ ಜಿಲ್ಲೆ ಆಗಬೇಕು ಎಂಬ ಬೇಡಿಕೆ ನಮ್ಮದೂ ಇದೆ' ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸತೀಶ, 'ಬೇಡಿಕೆ ಎಲ್ಲರದ್ದೂ ಇದೆ. ಕುಳಿತು ಚರ್ಚೆ ಮಾಡೋಣ. ಸರ್ಕಾರ ನಿರ್ಧಾರ ತೆಗೆದುಕೊಳ್ಳುತ್ತದೆ' ಎಂದರು.

**ಅತ್ತೆಗೇ ಮೊದಲ ಆದ್ಯತೆ:**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮಾತನಾಡಿ, 'ಗೃಹಲಕ್ಷ್ಮೀ' ಯೋಜನೆ ಅಡಿ ರೂ 2000 ನೆರವನ್ನು ಒಂದು ಮನೆಯಲ್ಲಿ ಅತ್ತೆಗೆ ಕೊಡಬೇಕೋ, ಸೊಸೆಗೆ ಕೊಡಬೇಕೋ ಎಂಬ ಬಗ್ಗೆ ಹಲವರು ಪ್ರಶ್ನೆ ಮಾಡುತ್ತಿದ್ದಾರೆ. ಆದರೆ, ಮನೆಯಲ್ಲಿ ಹಿರಿಯರಾದ ಅತ್ತೆಗೆ ಪ್ರಾಧಾನ್ಯತೆ ಕೊಡಬೇಕಾಗುತ್ತದೆ. ನಮ್ಮ ಸಂಸ್ಕೃತಿಯಲ್ಲಿ ಅತ್ತೆಯೇ ಮನೆಯ ಯಜಮಾನಿ. ಹಾಗಾಗಿ, ಅತ್ತೆಗೆ ಈ ನೆರವು ಸಿಗಲಿದೆ' ಎಂದರು.

ಇದಕ್ಕೆ ಧ್ವನಿಗೂಡಿಸಿದ ಸಚಿವ ಸತೀಶ ಜಾರಕಿಹೊಳಿ, 'ಸ್ವತಃ ಅತ್ತೆಯೇ ಮುಂದೆ ಬಂದು ಸೊಸೆಗೆ ನೆರವು ಕೊಡಲು ಬಯಸಿದರೆ ಮಾತ್ರ ಸೊಸೆಗೆ ಕೊಡುತ್ತೇವೆ' ಎಂದರು.

## ಐದು ಗ್ಯಾರಂಟಿ ಜಾರಿ ಸರಕಾರದ ಜವಾಬ್ದಾರಿ: ಹೆಚ್.ಡಿ.ಕುಮಾರಸ್ವಾಮಿ



ಬೆಂಗಳೂರು: ಭರವಸೆ ನೀಡಿದ್ದೀರಿ, ಗೆದ್ದು ಅಧಿಕಾರ ಹಿಡಿದಿದ್ದೀರಿ. ಐದು ಗ್ಯಾರಂಟಿ ಜಾರಿ ಮಾಡುವುದು ನಿಮ್ಮ ಜವಾಬ್ದಾರಿ ಎಂದು ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಚಾಟಿ ಬೀಸಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಅವರು; ನೆಪ ಹೇಳದೆ ಗ್ಯಾರಂಟಿಗಳನ್ನು ಜಾರಿ ಮಾಡಿ ಎಂದು ಒತ್ತಾಯ ಮಾಡಿದ್ದಾರೆ.

ಕಾಂಗ್ರೆಸ್ ಗೆ 135 ಸೀಟು ಕೊಟ್ಟ ಜನತೆಯ 'ಗ್ಯಾರಂಟಿ ಬೇಡಿಕೆ'ಯಲ್ಲಿ ನ್ಯಾಯವಿದೆ. 5 ಗ್ಯಾರಂಟಿ ಜಾರಿ ರಾಜ್ಯ ಕಾಂಗ್ರೆಸ್ ಸರಕಾರದ ಜವಾಬ್ದಾರಿ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಆಗುವುದಕ್ಕೆ ಮುನ್ನ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಅವರೇ ಸಹಿ ಮಾಡಿಕೊಟ್ಟ ಕಾರ್ಡುಗಳು ಜನರ ಬಳಿ ಇವೆ. ಆ ಗ್ಯಾರಂಟಿಗಳಿಗೆ ಗ್ಯಾರಂಟಿಯೇ ಇಲ್ಲವೇ? ಎಂದು ಅವರು ಪ್ರಶ್ನಿಸಿದ್ದಾರೆ.

ದಿನನಿತ್ಯವೂ ಗ್ಯಾರಂಟಿಗಳ ಬಗ್ಗೆ ಜನರಲ್ಲಿ ನಿರೀಕ್ಷೆಯೂ ಮೇರೆ ಮೀರುತ್ತದೆ, ಆಕ್ರೋಶವೂ ಹೆಚ್ಚುತ್ತಿದೆ. ಜನಾಕ್ರೋಶಕ್ಕೆ ಸಬೂಬು ಸರಿಯಲ್ಲ. ಏಕೆಂದರೆ, ನಿರೀಕ್ಷೆ ಮೂಡಿಸಿದ್ದು ಇವರೇ. ಈಗ ಷರತ್ತು ನೆಪದಲ್ಲಿ ಜನರನ್ನು ಸತಾಯಿಸುವುದು ನ್ಯಾಯವಲ್ಲ.ಗ್ಯಾರಂಟಿಗಳ ಬಗ್ಗೆ ಮಾಧ್ಯಮಗಳಲ್ಲಿ ಅಬ್ಬರಿಸಿದ ಇವರೇ, ಈಗ ಮೀನಾಮೇಷ ಎಂದರೆ ಜನ ಒಪ್ಪುವರೇ? ಎಂದು ಮಾಜಿ ಮುಖ್ಯಮಂತ್ರಿ ಅವರು ಕೇಳಿದ್ದಾರೆ.

ನನಗೂ ಫ್ರೀ, ನಿನಗೂ ಫ್ರೀ, ಸರ್ವರಿಗೂ ಫ್ರೀ ಎಂದ ಮುಖ್ಯಮಂತ್ರಿಗಳಿಗೆ ಈಗ ಗ್ಯಾರಂಟಿಗಳ ಬಗ್ಗೆ ದಿವ್ಯಮೌನವೇಕೆ? ಅವರ ಅಕ್ಕಪಕ್ಕದವರ ಹೇಳಿಕೆಗಳನ್ನು ಜನರು ನಂಬುತ್ತಿಲ್ಲ. ಮುಖ್ಯಮಂತ್ರಿಗಳೇ ಜನರಿಗೆ ನೇರವಾಗಿ ಹೇಳಲಿ, ಜನರಲ್ಲಿ ವಿಶ್ವಾಸ ಮೂಡಿಸಲಿ. ಮಾಧ್ಯಮಗಳಲ್ಲಿ ಕಾಂಗ್ರೆಸ್ ಕೊಟ್ಟ 'ಗ್ಯಾರಂಟಿ ಜಾಹೀರಾತು'ಗಳೂ ಇನ್ನೂ ಜನಮಾನಸದಿಂದ ಮಾಸಿಲ್ಲ. ಅದೇ ರೀತಿ; ಸ್ವತಃ ಮುಖ್ಯಮಂತ್ರಿಗಳೇ ಜೂನ್ 1ಕ್ಕೆ ಜಾರಿ ಮಾಡುವ ಬಗ್ಗೆ ಜಾಹೀರಾತು ನೀಡಿ ಜನರಿಗೆ ಖಾತರಿ ಕೊಡಲಿ. ವಿಳಂಬದಿಂದ ಸರಕಾರದ ವಿಶ್ವಾಸಾರ್ಹತೆಗೆ ಪೆಟ್ಟು ಬೀಳುವುದೇ ಹೆಚ್ಚು. ಜನರಿಗೆ ಅಭದ್ರತೆಯ ಗ್ಯಾರಂಟಿ ಬೇಡವೇ ಬೇಡ ಎಂದು ಅವರು ಹೇಳಿದ್ದಾರೆ.

ಅದು ಬಿಟ್ಟು 'ಕೆಲ ಸಚಿವರು, ಶಾಸಕ'ರನ್ನು ನನ್ನ ಮೇಲೆ ಛೂ ಬಿಟ್ಟರೆ ಪ್ರಯೋಜನವಿಲ್ಲ. ಅಂಥ ರಾಜಕಾರಣ ಉಪಯೋಗವೂ ಇಲ್ಲ. ಗ್ಯಾರಂಟಿಗಳ ಬಗ್ಗೆ ಜನಕ್ಕೆ ಬೆಟ್ಟದಷ್ಟು ನಿರೀಕ್ಷೆ ಇದೆ. ಜಾರಿ ಮಾಡಿ, ಅದರ ಹೊರತಾಗಿ ಈ ಭರವಸೆಗಳೇ ಅಗಮ್ಯಗೋಚರವಾಗಿ ಗಮ್ಯವೇ ಇಲ್ಲದ ಆಡಳಿತ ಕೊಡುವುದು ಬೇಡ. ಇಷ್ಟೇ ನನ್ನ ಕಾಳಜಿ ಎಂದಿದ್ದಾರೆ ಅಲ್ಲದೆ, 'ಗ್ಯಾರಂಟಿ ಜಾರಿ ಸರಕಾರದ ಜವಾಬ್ದಾರಿ' ಎಂದು ಹ್ಯಾಷ್ ಟ್ಯಾಗ್ ಮಾಡಿದ್ದಾರೆ.

## ಗ್ಯಾರಂಟಿಗಳ ಅನುಷ್ಠಾನ ಗ್ಯಾರಂಟಿ



ಚಿತ್ರದುರ್ಗ: ಕಾಂಗ್ರೆಸ್ ಪಕ್ಷ ಘೋಷಿಸಿರುವ ಎಲ್ಲ ಐದು ಗ್ಯಾರಂಟಿಗಳು ಸಾಮಾಜಿಕ ಭದ್ರತೆಯ ಯೋಜನೆಗಳಾಗಿದ್ದು, ಇದನ್ನು ಸರ್ಕಾರ ಅನುಷ್ಠಾನಕ್ಕೆ ತಂದೆ ತರುತ್ತದೆ ಎಂದು ನೂತನ ಸಚಿವ ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಚಿತ್ರದುರ್ಗದ ಕಾಂಗ್ರೆಸ್ ಕಚೇರಿಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ನುಡಿದಂತೆ ನಡೆಯುವ ಸರ್ಕಾರ ಎಂದರೆ ಕಾಂಗ್ರೆಸ್ ಸರ್ಕಾರ, ಈ ಹಿಂದೆಯೂ ಸಿದ್ದರಾಮಯ್ಯನವರು ನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸಿದ್ದಾರೆ ಈಗಲೂ ನಾವು ಕೊಟ್ಟ ಭರವಸೆಯಂತೆ ನಡೆಯುತ್ತೇವೆ ಎಂದು ತಿಳಿಸಿದರು.

ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷದ ಬಗ್ಗೆ ವಿಶ್ವಾಸವಿಟ್ಟು ಭಾರಿ ಬಹುಮತದಿಂದ ಗೆಲ್ಲಿಸಿದ್ದಾರೆ ಆ ವಿಶ್ವಾಸವನ್ನು ನಾವು ಉಳಿಸಿಕೊಳ್ಳಬೇಕು ಸರ್ಕಾರ ಗ್ಯಾರಂಟಿಗಳನ್ನ ನಿಶ್ಚಿತವಾಗಿ ಇಳಿರಿಸುತ್ತದೆ ಈಗ ಪಕ್ಷದ ಕಾರ್ಯಕರ್ತರು ಗೆಲುವಿನಿಂದ ಬೀಗದೆ ಮುಂಬರುವ ತಾಲೂಕು ಪಂಚಾಯಿತಿ ಜಿಲ್ಲಾ ಪಂಚಾಯಿತಿ ಹಾಗೂ ಲೋಕಸಭಾ ಚುನಾವಣೆಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ವೀರೇಂದ್ರ ಪಪ್ಪಿ ಮಾತನಾಡಿ ಪಕ್ಷದ ಕಚೇರಿಗೆ ಆಗಮಿಸಿ ಕಾರ್ಯಕರ್ತರಿಗೆ ಇಂದು ಈಶ್ವರ ಖಂಡ್ರೆ ಅವರು ಮತ್ತಷ್ಟು ಚೈತನ್ಯ ತುಂಬಿದ್ದಾರೆ ಅಂತ ತಿಳಿಸಿದರು.

## ಶೀಘ್ರದಲ್ಲೇ ಕಾರ್ಮಿಕರಿಗೆ ಸಿಹಿ ಸುದ್ದಿ: ಸಂತೋಷ್ ಲಾಡ್



ಹುಬ್ಬಳ್ಳಿ: 'ಜೂನ್ 1 ರಂದು ಮೊದಲ ಸಚಿವ ಸಂಪುಟ ಸಭೆ ನಡೆಯಲಿದ್ದು, 'ಗ್ಯಾರಂಟಿ' ಕಾರ್ಯಕ್ರಮಗಳ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ. ಶೀಘ್ರದಲ್ಲೇ ರಾಜ್ಯದ ಜನರಿಗೆ ಒಳ್ಳೆಯ ಸುದ್ದಿ ಸಿಗಲಿದೆ' ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು. ಸಚಿವರಾದ ಬಳಿಕ ಮೊದಲ ಬಾರಿಗೆ ಹುಬ್ಬಳ್ಳಿಗೆ ಮಂಗಳವಾರ ಬಂದ ಅವರು, ನಗರದ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಕಳೆದ ಬಾರಿ ಕಾರ್ಮಿಕ ಸಚಿವನಾಗಿದ್ದಾಗ ಕಡಿಮೆ ಸಮಯ ಸಿಕ್ಕಿತ್ತು. ಈಗ ಮತ್ತೆ ಅದೇ ಖಾತೆ ಸಿಕ್ಕಿರುವುದರಿಂದ ಹೆಚ್ಚಿನ ಕೆಲಸ ಮಾಡುವ, ಕಾರ್ಯಕ್ರಮಗಳನ್ನು ನೀಡುವ ಗುರಿಯಿದೆ' ಎಂದರು.

ಕಾರ್ಮಿಕ ಕಲ್ಯಾಣ ನಿಧಿಯನ್ನು ಬಿಜೆಪಿ ದುರ್ಬಳಕೆ ಮಾಡಿಕೊಂಡಿದೆ ಎಂಬ ಆರೋಪದ ಕುರಿತ ಪ್ರಶ್ನೆಗೆ, 'ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಈ ಬಗ್ಗೆ ಪರಿಶೀಲಿಸಲಾಗುವುದು' ಎಂದರು.

## ರಾಜ್ಯದ ವಿವಿಧೆಡೆ ಜೂ.2ರವರೆಗೆ ಮಳೆ; ಹಲವೆಡೆ ಯೆಲ್ಲೋ ಅಲರ್ಟ್



ಬೆಂಗಳೂರು: ರಾಜ್ಯದ ವಿವಿಧೆಡೆ ಜೂ. 2ರವರೆಗೆ ವ್ಯಾಪಕ ಮಳೆಯಾಗಲಿದ್ದು ಅಂಥ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬೆಂಗಳೂರು ನಗರ, ಗ್ರಾಮಾಂತರ, ಕೊಡಗು, ಚಾಮರಾಜನಗರ, ತುಮಕೂರು, ಮಂಡ್ಯ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು ಹಾಗೂ ರಾಮನಗರ ಜಿಲ್ಲೆಗಳಲ್ಲಿ ಭಾರೀ ಮಳೆ ಮುನ್ಸೂಚನೆ ನೀಡಲಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಉತ್ತರ ಒಳನಾಡು ಜಿಲ್ಲೆಗಳಾದ ಬಾಗಲಕೋಟ , ಕೊಪ್ಪಳ, ರಾಯಚೂರು, ವಿಜಯಪುರ, ದಕ್ಷಿಣ ಒಳನಾಡಿನ ಮೈಸೂರು, ಶಿವಮೊಗ್ಗ ವಿಜಯನಗರ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ.

ಬಹುತೇಕ ಕಡೆ ಮೋಡ ಕವಿದ ವಾತಾವರಣವಿದ್ದು ತಂಪು ಗಾಳಿಯ ಬೀಸುವಿಕೆ ಇರಲಿದೆ.

ರಾಯಚೂರು ಸೇರಿದಂತೆ ಕೆಲವೆಡೆ ಮಾತ್ರ ಉಷ್ಣಾಂಶದಲ್ಲಿ 2–3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಅಶ್ವತ್ಥ್ ನಾರಾಯಣಗೆ ಹೈಕೋರ್ಟ್ ಬಿಗ್ ರಿಲೀಫ್



ಬೆಂಗಳೂರು: ಉರಿಗೌಡ–ನಂಜೇಗೌಡರು ಟಿಪ್ಪುವನ್ನು ಮುಗಿಸಿದಂತೆ ಸಿದ್ದರಾಮಯ್ಯ ಅವರನ್ನೂ ಮುಗಿಸಬೇಕು ಎಂಬ ಹೇಳಿಕೆಗೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದಾಖಲಾಗಿರುವ ಎಫ್ಐಆರ್ ರದ್ದುಪಡಿಸುವಂತೆ ಕೋರಿ ಬಿಜೆಪಿ ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ ಹೈಕೋರ್ಟ್ ಮೆಟ್ಟಿಲೇರಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಜೀವಬೆದರಿಕೆ ಹಾಕಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ, ಬಿಜೆಪಿ ಶಾಸಕ ಅಶ್ವತ್ಥ್ ನಾರಾಯಣಗೆ ಕರ್ನಾಟಕ ಹೈಕೋರ್ಟ್ ಬಿಗ್ ರಿಲೀಫ್ ನೀಡಿದೆ. ಮೈಸೂರಿನ ದೇವರಾಜ ಪೊಲೀಸ್ ಠಾಣೆಯಲ್ಲಿ ಅಶ್ವತ್ಥ್ ನಾರಾಯಣ ವಿರುದ್ಧ ಎಫ್ಐಆರ್ಗೆ ತಡೆ ನೀಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಎಫ್ಐಆರ್ ರದ್ದು ಕೋರಿ ಬಿಜೆಪಿ ಶಾಸಕ ಅಶ್ವತ್ಥ್ ನಾರಾಯಣ ಅವರು ಹೈಕೋರ್ಟ್ ಅರ್ಜಿ ಸಲ್ಲಿಸಿದ್ದರು. ಇಂದು(ಮೇ,30) ಈ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ, ಅಶ್ವತ್ಥ್ ನಾರಾಯಣ ವಿರುದ್ಧ ಎಫ್ಐಆರ್ಗೆ ತಡೆಯಾಜ್ಞೆ ನೀಡಿ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಪೀಠ ಆದೇಶ ಹೊರಡಿಸಿದೆ.

ಚುನಾವಣೆಯಲ್ಲಿ ಸೋಲಿಸಬೇಕೆಂಬ ರೀತಿಯಲ್ಲಿ ನೀಡಿದ ಹೇಳಿಕೆ ನೀಡಲಾಗಿತ್ತು. ಫೆಬ್ರವರಿ ತಿಂಗಳ ದೂರು ಸಂಬಂಧ ಎನ್ಸಿಆರ್ ದಾಖಲಾಗಿತ್ತು. ಸರ್ಕಾರ ಬದಲಾದ ನಂತರ ಹೊಸ ದೂರು ನೀಡಲಾಗಿದೆ. ರುದ್ದೇಶ ಪೂರ್ವಕವಾಗಿ ಎಫ್ಐಆರ್ ದಾಖಲಿಸಲಾಗಿದೆ. ಮೇಲ್ನೋಟಕ್ಕೆ ಐಪಿಸಿ ಸೆಕ್ಷನ್153 ರಂತೆ ಅಪರಾಧವಾಗುವ ಅಂಶಗಳಿಲ್ಲ ಹೀಗಾಗಿ ಎಫ್ಐಆರ್ಗೆ ತಡೆ ನೀಡುವಂತೆ ಅಶ್ವತ್ಥ್ ನರಾಯಣ ಪರ ಹಿರಿಯ ವಕೀಲ ಪ್ರಭುಲಿಂಗ್ ನಾವಡಗಿ ವಾದ ಮಂಡಿಸಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸರ್ಕಾರದ ಪರ ವಕೀಲ, ಜಾಮೀನು ನೀಡಬಹುದಾದ ಪ್ರಕರಣವಾದ್ದರಿಂದ ತಡೆ ಬೇಡ ಎಂದು ವಾದಿಸಿದರು. ಈ ವಾದ ವಿವಾದ ಆಲಿಸಿದ ನ್ಯಾ.ಎಂ.ನಾಗಪ್ರಸನ್ನ ಅವರ ಪೀಠ ಎಫ್ಐಆರ್ಗೆ ತಡೆಯಾಜ್ಞೆ ನೀಡಿ ಆದೇಶಿಸಿದೆ.

2023ರ ಫೆ.15ರಂದು ಮಂಡ್ಯದ ಸಾತನೂರಿನ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಅಂದು ಸಚಿವರಾಗಿದ್ದ ಅಶ್ವತ್ಥನಾರಾಯಣ ಅವರು, ಟಿಪ್ಪುವನ್ನು ಉರಿಗೌಡ–ನಂಜೇಗೌಡರು ಮುಗಿಸಿದಂತೆ ಸಿದ್ದರಾಮಯ್ಯ ಅವರನ್ನು ಹೊಡೆದುಹಾಕಿ ಎಂದು ಹೇಳಿಕೆ ನೀಡಿದ್ದರು. ಈ ಸಂಬಂಧ ಮೈಸೂರಿನ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಅವರು ಫೆ.17ರಂದು ದೂರು ನೀಡಿದ್ದರು.

## ಮಹಾರಾಷ್ಟ್ರ ಕಾಂಗ್ರೆಸ್ ನ ಏಕೈಕ ಸಂಸದ ನಿಧನ



ಮಹಾರಾಷ್ಟ್ರ ಕಾಂಗ್ರೆಸ್ ನ ಏಕೈಕ ಲೋಕಸಭಾ ಸದಸ್ಯ ಬಾಲು ಧನೋರ್ಕರ್ ಮಂಗಳವಾರ ಮುಂಜಾನೆ ದೆಹಲಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ಅವರಿಗೆ 48 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಪ್ರತಿಭಾ ಧನೋರ್ಕರ್ ಮತ್ತು ಇಬ್ಬರು ಪುತ್ರರನ್ನು ಅಗಲಿದ್ದಾರೆ.

ಮುಂಬೈ: ಮಹಾರಾಷ್ಟ್ರ ಕಾಂಗ್ರೆಸ್ನ ಏಕೈಕ ಲೋಕಸಭಾ ಸದಸ್ಯ ಬಾಲು ಧನೋರ್ಕರ್ ಮಂಗಳವಾರ ಮುಂಜಾನೆ ದೆಹಲಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ಅವರಿಗೆ 48 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಪ್ರತಿಭಾ ಧನೋರ್ಕರ್ ಮತ್ತು ಇಬ್ಬರು ಪುತ್ರರನ್ನು ಅಗಲಿದ್ದಾರೆ.

ಮೂತ್ರಪಿಂಡದ ಕಲ್ಲು ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ಚಿಕಿತ್ಸೆಗಾಗಿ ಕಳೆದ ವಾರ ನಾಗ್ಪುರ ಮೂಲದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ ನವದೆಹಲಿಗೆ ಸ್ಥಳಾಂತರಿಸಲಾಗಿತ್ತು ಎಂದು ಕಾಂಗ್ರೆಸ್ ನಾಯಕ ಬಾಳಾಸಾಹೇಬ್ ಥೋರಟ್ ಹೇಳಿದ್ದಾರೆ. ಧನೋರ್ಕರ್ ಅವರ ನಿಧನಕ್ಕೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಸಂತಾಪ ಸೂಚಿಸಿದ್ದಾರೆ.

ಚಂದ್ರಾಪುರ ಜಿಲ್ಲೆಯಲ್ಲಿ ಬಾಳಾಸಾಹೇಬ್ ಠಾಕ್ರೆ ನೇತೃತ್ವದ ಶಿವಸೇನೆಯಲ್ಲಿ ತಮ್ಮ ರಾಜಕೀಯ ವೃತ್ತಿಜೀವನ ಪ್ರಾರಂಭಿಸಿದ ಧನೋಕರ್ 2014 ರಲ್ಲಿ ವಿಧಾನಸಭಾ ಚುನಾವಣೆ ಯಲ್ಲಿ ಗೆದಿದ್ದರು. ನಂತರ ಕಾಂಗ್ರೆಸ್ ಪಕ್ಷ ಸೇರಿ ಅದೇ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು.



## ರಾಜ್ಯ ಸರ್ಕಾರಿ ನೌಕರರಿಗೆ ತುಟ್ಟಿ ಭತ್ಯೆ 4% ಹೆಚ್ಚಳ

ಬೆಂಗಳೂರು: ಕಾಂಗ್ರೆಸ್ ಸರ್ಕಾರ ರಾಜ್ಯದ ಚುಕ್ಕಾಣಿ ಹಿಡಿಯುತ್ತಿದ್ದಂತೆ ಸರ್ಕಾರಿ ನೌಕರರಿಗೆ ಬಂಪರ್ ಸುದ್ದಿ ನೀಡಿದೆ. ರಾಜ್ಯ ತುಟ್ಟಿಭತ್ಯೆಯನ್ನು ಶೇ 4ಷ್ಟು ಹೆಚ್ಚಿಸಿ (ಆಂ ಮಂಗಳವಾರ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರ ಸರ್ಕಾರಿ ನೌಕರರಿಗೆ ಗುಡ್ ನ್ಯೂಸ್ ನೀಡಿದೆ. ನೌಕರರ ತುಟ್ಟಿ ಭತ್ಯ 4% ಹೆಚ್ಚಿಸಿ ಆದೇಶ ಹೊರಡಿಸಿದೆ.

ಕೆಲವು ದಿನಗಳಿಂದ ಸರ್ಕಾರಿ ನೌಕರರು ಈ ಸುದ್ದಿಗಾಗಿ ಕಾಯುತ್ತಿದ್ದರು.

ಇದೀಗ ಕಾಂಗ್ರೆಸ್ ಸರ್ಕಾರ ರಾಜ್ಯದ ಚುಕ್ಕಾಣಿ ಹಿಡಿಯುತ್ತಿದ್ದಂತೆ ಸರ್ಕಾರಿ ನೌಕರರಿಗೆ ಬಂಪರ್ ಸುದ್ದಿ ನೀಡಿದೆ.

ರಾಜ್ಯ ತುಟ್ಟಿಭತ್ಯೆಯನ್ನು ಶೇ 4ಷ್ಟು ಹೆಚ್ಚಿಸಿ ಮಂಗಳವಾರ ಆದೇಶ ಹೊರಡಿಸಿದೆ.

ಪರಿಷ್ಕೃತ ತುಟ್ಟಿ ಭತ್ಯೆ 2023ರ ಜನವರಿ 1ರಿಂದಲೇ ಪೂರ್ವಾನ್ವಯವಾಗಲಿದೆ.

2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ 2023 ರ ಜನವರಿ 1ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರಗಳನ್ನು ಹೆಚ್ಚಿಸಲಾಗಿದೆ.

ಮೂಲ ವೇತನದ ಶೇಕಡ 31 ರಿಂದ ಶೇಕಡ 35 ಕ್ಕೆ ಪರಿಷ್ಕರಿಸಿ ಮಂಜೂರು ಮಾಡಲು ಸೂಚಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

## ರಾಜ್ಯಾದ್ಯಂತ 3 ಲಕ್ಷಕ್ಕೂ ಹೆಚ್ಚು ಬಿಪಿಎಲ್ ರೇಷನ್ ಕಾರ್ಡ್ ರದ್ದು



ಬೆಂಗಳೂರು : ಆಹಾರ ಇಲಾಖೆ ಸುಳ್ಳು ಮಾಹಿತಿ ನೀಡಿ ಪಡಿತರ ಚೀಟಿ ಪಡೆದವರಿಗೆ ಬಿಗ್ ಶಾಕ್ ನೀಡಿದೆ. ನಿಯಮ ಉಲ್ಲಂಘಿಸಿ ರಾಜ್ಯಾದ್ಯಂತ ಆರ್ಥಿಕ ಸಬಲರು ಪಡೆದಿದ್ದ, 3,30,000 ರೇಷನ್ ಕಾರ್ಡ್ ಗಳನ್ನು ರದ್ದುಪಡಿಸಲಾಗಿದೆ.

ಸರ್ಕಾರಿ ಮತ್ತು ಅರೆ ಸರ್ಕಾರಿ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ 22 ಸಾವಿರ ನೌಕರರು ಬಿಪಿಎಲ್ ಪಡಿತರ ಚೀಟಿ ಪಡೆದಿದ್ದಾರೆ ಎಂಬ ಮಾಹಿತಿ ಆಹಾರ ಇಲಾಖೆಗೆ ಸಿಕ್ಕಿದ್ದು, ಈವರೆಗೆ 17,338 ಸರ್ಕಾರಿ ನೌಕರರ ಬಿಪಿಎಲ್ ಕಾರ್ಡ್ ಗಳನ್ನು ರದ್ದು ಮಾಡಲಾಗಿದೆ ಎಂದು ಆಹಾರ ಇಲಾಖೆ ತಿಳಿಸಿದೆ.

ಆಹಾರ ಇಲಾಖೆಯ ಮಾಹಿತಿ ಪ್ರಕಾರ, ರಾಜ್ಯಾದ್ಯಂತ 3,30,000 ರೇಷನ್ ಕಾರ್ಡ್ ಗಳನ್ನು ರದ್ದುಪಡಿಸಲಾಗಿದೆ.

ಇದರಲ್ಲಿ 3,08,345 ಬಿಪಿಎಲ್ ಕಾರ್ಡ್ ಮತ್ತು 21,679 ಅಂತ್ಯೋದಯ ಕಾರ್ಡ್ ಗಳಿವೆ.


ಬೆಂಗಳೂರಿನಲ್ಲಿ 34,705, ವಿಜಯಪುರದಲ್ಲಿ 28, 735, ಕಲಬುರಗಿ 16,945, ಬೆಳಗಾವಿ 16,765, ರಾಯಚೂರು 16,693 ಹಾಗೂ ಚಿತ್ರದುರ್ಗದಲ್ಲಿ 16,537 ರೇಷನ್ ಕಾರ್ಡ್ ಗಳನ್ನು ಡಿಲೀಟ್ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಹೊಸ ಬಿಪಿಎಲ್, ಅಂತ್ಯೋದಯ ರೇಷನ್ ಕಾರ್ಡ್ ಪಡೆಯಲು ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಆಹಾರ ಇಲಾಖೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ.

2021–22 ನೇ ಸಾಲಿನಲ್ಲಿ ಆನ್ ಲೈನ್ ಮೂಲಕ ಹೊಸದಾಗಿ ಬಿಪಿಎಲ್ ಪಡಿತರ ಚೀಟಿ ಕೋರಿ ರಾಜ್ಯಾದ್ಯಂತ ಸಲ್ಲಿಕೆಯಾಗಿರುವ 7,61,902 ಅರ್ಜಿಗಳ ಪೈಕಿ ,18,046 ಅರ್ಜಿಗಳು ವಿಲೇವಾರಿಯಾಗಿವೆ.

2,60,418 ಅರ್ಜಿಗಳು ಅನುಮೋದನೆಯಾದರೆ, 1,57,625 ಅರ್ಜಿಗಳು ತಿರಸ್ಕೃತಗೊಂಡಿವೆ. 3,43,856 ಅರ್ಜಿಗಳು ಬಾಕಿ ಉಳಿದಿದ್ದು, ವಿಲೇವಾರಿಗೆ ಸರ್ಕಾರದ ಅನುಮತಿಗಾಗಿ ಆಹಾರ ಇಲಾಖೆ ಕಾಯುತ್ತಿದೆ. ಅನುಮತಿ ಸಿಕ್ಕ ತಕ್ಷಣ ಪ್ರಕ್ರಿಯೆ ಶುರು ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ತಂದೆಯ ಸಲಹೆಯಂತೆ ತಂಬಾಕು ಜಾಹಿರಾತಿನಿಂದ ದೂರವಿದ್ದೇನೆ



ಮುಂಬೈ: ಕ್ರಿಕೆಟ್ ಕ್ಷೇತ್ರದ ಲೆಜೆಂಡ್ ಸಚಿನ್ ತೆಂಡೂಲ್ಕರ್ ತಾವು ಎಂದಿಗೂ ತಂಬಾಕು ಜಾಹಿರಾತಿನಲ್ಲಿ ನಟಿಸದೇ ಇರುವುದಕ್ಕೆ ತಮ್ಮ ತಂದೆಯ ಸಲಹೆಯೇ ಕಾರಣ ಎಂಬ ಮಾಹಿತಿ ಹಂಚಿಕೊಂಡಿದ್ದಾರೆ.

ತಮಗೆ ತಂಬಾಕು ಉತ್ಪನ್ನಗಳನ್ನು ಉತ್ತೇಜಿಸುವುದಕ್ಕೆ, ಪ್ರೊಮೋಟ್ ಮಾಡುವುದಕ್ಕಾಗಿ ಬಹಳಷ್ಟು ಅವಕಾಶಗಳು ಬಂದಿತ್ತು. ಆದರೆ ಜೀವನದ ಗುರಿಗಳನ್ನು ಸಾಧಿಸುವುದಕ್ಕೆ ಫಿಟ್ನೆಸ್ ಬಗ್ಗೆ ಶಿಸ್ತನ್ನು ಬೆಳೆಸಿಕೊಳ್ಳುವುದು, ಜಾಗ್ರತರಾಗಿರುವುದು ಬಹಳ ಮುಖ್ಯ ಎಂದು ಸಚಿನ್ ತೆಂಡೂಲ್ಕರ್ ಹೇಳಿದ್ದಾರೆ.

ಬಾಯಿಯ ನೈರ್ಮಲ್ಯ ಅಭಿಯಾನದ ಭಾಗವಾಗಿರುವ ಮಹಾರಾಷ್ಟ್ರ ಸರ್ಕಾರದ ಸ್ವಚ್ಛ ಮುಖ್ ಅಭಿಯಾನ್ (ಎಸ್ಎಂಎ) ಗೆ ನಗುವಿನ ರಾಯಭಾರಿ (Smile Ambassador )ಯಾಗಿ ನೇಮಕಗೊಂಡ ಕಾರ್ಯಕ್ರಮದಲ್ಲಿ ಮಾತನಾಡಿರುವ ಸಚಿನ್ ತೆಂಡೂಲ್ಕರ್, ನಾನು ಭಾರತ ಕ್ರಿಕೆಟ್ ತಂಡಕ್ಕಾಗಿ ಆಡಲು ಆರಂಭಿಸಿದಾಗ, ಆಗಷ್ಟೇ ಶಾಲಾ ವಿದ್ಯಾಭ್ಯಾಸ ಮುಗಿಸಿದ್ದೆ. ಆಗ ನನಗೆ ಜಾಹಿರಾತುಗಳಲ್ಲಿ ನಟಿಸಿ, ಉತ್ಪನ್ನಗಳನ್ನು ಪ್ರೊಮೋಟ್ ಮಾಡಲು ಅನೇಕ ಅವಕಾಶಗಳು ಬಂದಿದ್ದವು. ಆದರೆ ಎಂದಿಗೂ ತಂಬಾಕು ಉತ್ಪನ್ನಗಳನ್ನು ಉತ್ತೇಜಿಸದಂತೆ ನನಗೆ ಹೇಳಿದ್ದರು. ಅಂತೆಯೇ ನನಗೆ ಬಂದಿದ್ದ ಅನೇಕ ತಂಬಾಕು ಜಾಹಿರಾತು ಆಫರ್ ಗಳನ್ನು ನಾನು ಒಪ್ಪಿಕೊಳ್ಳಲಿಲ್ಲ ಎಂದು ತೆಂಡೂಲ್ಕರ್ ಹೇಳಿದ್ದಾರೆ.

ಬಾಯಿಯ ಉತ್ತಮ ಆರೋಗ್ಯ ಉತ್ತಮವಾಗಿದ್ದರೆ ಒಟ್ಟಾರೆ ಆರೋಗ್ಯ ಉತ್ತಮ ವಾಗಿರಲಿದೆ ಎಂದು ತೆಂಡೂಲ್ಕರ್ ಈ ಕಾರ್ಯಕ್ರಮದಲ್ಲಿ ಹೇಳಿದರು. ಫಿಟ್ನೆಸ್ನ ಮಹತ್ವವನ್ನು ಅವರು ಒತ್ತಿ ಹೇಳಿದ್ದು, ಅದು ಅವರ ಜೀವನದ ಗುರಿ ಸಾಧಿಸಲು ಸಹಾಯ ಮಾಡಿದೆ ಎಂದು ಹೇಳಿದ್ದಾರೆ.

## ಕರೆಂಟ್ ಬಿಲ್ ಕಟ್ಟೋದಿಲ್ಲ ಎನ್ನುತ್ತಿದ್ದವರಿಗೆ ಶಾಕ್ ನೀಡಿದ ಇಂಧನ ಇಲಾಖೆ

ಬೆಂಗಳೂರು : ಇಂಧನ ಇಲಾಖೆಯೂ ಕರೆಂಟ್ ಬಿಲ್ ಕಟ್ಟದ ಜನತೆಗೆ ಶಾಕ್ ನೀಡಿದೆ. ಅದರಂತೆ ಕರೆಂಟ್ ಬಿಲ್ ಕಟ್ಟದಿದ್ದರೆ ಕನೆಕ್ಷನ್ ಕಟ್ ಮಾಡುವಂತೆ ಎಲ್ಲಾ ಎಸ್ಕಾಂಗಳಿಗೆ ಖಡಕ್ ಸೂಚನೆ ನೀಡಿದೆ.

ರಾಜ್ಯ ಸರ್ಕಾರದ ಗೃಹಜ್ಯೋತಿ ಯೋಜನೆ ಇನ್ನೂ ಜಾರಿಯಾಗಿಲ್ಲ. ಆದರೆ ಜನರು ಕರೆಂಟ್ ಬಿಲ್ ಕಟ್ಟಲು ಹಿಂದೇಟು ಹಾಕುತ್ತಿದ್ದಾರೆ. ನಾವು ಬಿಲ್ ಕಟ್ಟೊದಿಲ್ಲ ಎನ್ನುತ್ತಿದ್ದಾರೆ. ಹೀಗಾಗಿ ಇಂಧನ ಇಲಾಖೆ ಕರೆಂಟ್ ಬಿಲ್ ಕಟ್ಟದಿದ್ದರೆ ಕನೆಕ್ಷನ್ ಕಟ್ ಮಾಡುವಂತೆ ರಾಜ್ಯದ ಎಲ್ಲಾ ಎಸ್ಕಾಂಗಳಿಗೆ ಸೂಚನೆ ನೀಡಿದೆ ಎಂದು ತಿಳಿದುಬಂದಿದೆ.

ಜನರು 3 ತಿಂಗಳ ಬಿಲ್ ಬಾಕಿ ಕಟ್ಟದಿದ್ದರೆ ಲೈಸೆನ್ಸ್ ರದ್ದು ಮಾಡಲಾಗುವುದು. ಬಾಕಿ ಇರುವ, ಪ್ರಸ್ತುತ ವಿದ್ಯುತ್ ಬಿಲ್ ಪಾವತಿಸಬೇಕು. ಬಳಸಿರುವ ವಿದ್ಯುತ್ ಬಿಲ್ ಪಾವತಿಸಬೇಕು ಎಂದು ಸೂಚನೆ ನೀಡಿದೆ. ಕರೆಂಟ್ ಬಿಲ್ ಪಾವತಿ ವಿಳಂಬ ಮಾಡಿದರೂ ದಂಡ ಹಾಕಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದೆ.

# ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಎಚ್ಚರಿಕೆವಹಿಸಿ: ಅಧಿಕಾರಿಗಳಿಗೆ ಕೃಷಿ ಸಚಿವ ಚಲುವರಾಯಸ್ವಾಮಿ ಸೂಚನೆ

ಬೆಂಗಳೂರು: ಮುಂಗಾರು ಹಂಗಾಮು ಆರಂಭವಾಗುತ್ತಿದ್ದು ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಆಗದಂತೆ ಎಚ್ಚರಿಕೆವಹಿಸಿ ಎಂದು ಕೃಷಿ ಸಚಿವ ಚಲವರಾಯಸ್ವಾಮಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಇಲಾಖೆ ಜವಾಬ್ದಾರಿವಹಿಸಿಕೊಂಡ ಬಳಿಕ ಇಂದು ವಿಧಾನಸೌಧದಲ್ಲಿ ಮೊದಲ ಬಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ಪರಿಚಯಾತ್ಮಕ ಹಾಗೂ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಈ ವೇಳೆ ಇಲಾಖೆಯ ಯೋಜನೆಗಳು, ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಬಗ್ಗೆ ಸಂಪೂರ್ಣ ಮಾಹಿತಿ ಪಡೆದರು.

ಪೂರ್ವ ಮುಂಗಾರಿನಲ್ಲಿ ವಾಡಿಕೆಯಾಗಿ 108 ಮಿಮಿ ಮಳೆಯಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ 108 ಮಿ ಮೀ ಮಳೆಯಾಗಿದ್ದು, ಯಾವುದೇ ಕೊರತೆ ಆಗಿರುವುದಿಲ್ಲ.

2022–23 ನೇ ಸಾಲಿನ ಮೂರನೇ ಮುಂಗಡ ಅಂದಾಜಿನಂತೆ 139.28 ಲಕ್ಷ ಟನ್‌ಗಳಷ್ಟು ಆಹಾರ ಧಾನ್ಯಗಳ ಉತ್ಪಾದನೆಯನ್ನು ಅಂದಾಜಿಸಲಾಗಿದೆ.

2023 ರ ಮುಂಗಾರು ಹಂಗಾಮಿನಲ್ಲಿ 82.35 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಇದೆ.



ಪೂರ್ವ ಮುಂಗಾರು ಬೆಳೆಗಳ 2.95 ಲಕ್ಷ ಹೆಕ್ಟೇರ್ ಗುರಿಯಿದ್ದು, ಇದುವರೆಗೆ 2.48 ಲಕ್ಷ ಹೆಕ್ಟೇರ್ (84%)ಪ್ರದೇಶದಲ್ಲಿ ಕೈಗೊಳ್ಳಲಾಗಿರುತ್ತದೆ.

5.54 ಲಕ್ಷ ಕ್ವಿಂಟಲ್ ಬಿತ್ತನೆ ಬೀಜಗಳ ಬೇಡಿಕೆಯಿದ್ದು, 7.85 ಲಕ್ಷ ಕ್ವಿಂಟಲ್ ಬಿತ್ತನೆ ಬೀಜಗಳು ಲಭ್ಯವಿದೆ. ಬಿತ್ತನೆ ಬೀಜದಲ್ಲಿ ಯಾವುದೇ ಕೊರತೆ ಇಲ್ಲ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

2023–24 ಸಾಲಿನ ಮುಂಗಾರು ಹಂಗಾಮಿಗೆ 25.47 ಲಕ್ಷ ಮೆ.ಟನ್ ರಸಗೊಬ್ಬರ ಬೇಡಿಕೆ ಇದೆ. 7.30 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜು ಆಗಿದೆ.

ಪ್ರಸ್ತುತ ಖಾಸಗಿ ಹಾಗೂ ಸಹಕಾರ ಸಂಘಗಳಲ್ಲಿ 13.90 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇದೆ.

1.68 ಲಕ್ಷ ಮೆ ಟನ್ ರಸಗೊಬ್ಬರ ಕಾಪು ದಾಸ್ತಾನು (Buffer Stock)ಸ ‘ರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಲಭ್ಯವಿದ್ದು, ಪ್ರಸ್ತುತ ರಸಗೊಬ್ಬರದ ಯಾವುದೇ ಕೊರತೆ ಇಲ್ಲ ಎಂದು ಮಾಹಿತಿ ನೀಡಿದರು.

ಅಗತ್ಯವಾದ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಇದ್ದು, ರೈತರಿಗೆ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಆಗಬಾರದು. ಪರೀಕ್ಷೆ ಮಾಡಿ ಗುಣಮಟ್ಟದ ಬಿತ್ತನೆ ಬೀಜಗಳನ್ನು ರೈತರಿಗೆ ಪೂರೈಕೆ ಮಾಡಬೇಕು. ರೈತರಿಗೆ ಅಗತ್ಯವಿರುವ ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಪೂರೈಸಬೇಕು. ಮುಂಗಾರಿನಲ್ಲಿ ರೈತರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಎಚ್ಚರಿಕೆವಹಿಸಬೇಕು ಎಂದು ಸಚಿವ ಚಲುವರಾಯಸ್ವಾಮಿ ಅವರು ಸೂಚನೆ ನೀಡಿದರು.

ಇದರ ಜೊತೆಗೆ ರೈತ ಸಂಪರ್ಕ ಕೇಂದ್ರಗಳಲ್ಲಿ ಕಡ್ಡಾಯವಾಗಿ ಂಔಗಳು ಹಾಜರಿರಬೇಕು. ಖರುಟ ಖಿಝಣ ರಿಪೋರ್ಟ್ ಗಳನ್ನು ಸೂಕ್ತ ಸಮಯದಲ್ಲಿ ನೀಡಬೇಕು. ಬೆಳೆ ವಿಮೆ ನೀಡುವಲ್ಲಿ ರೈತರಿಗೆ ಸಮಸ್ಯೆ ಆಗಬಾರದು. ಜಿಲ್ಲಾ ಮಟ್ಟದಲ್ಲಿ ಯಾವುದೇ ಸಮಸ್ಯೆಯಾದರೂ ಜಂಟಿ ನಿರ್ದೇಶಕರೇ ನೇರ ಹೊಣೆ ಆಗ್ತೀರಾ ಎಂದು ಸಚಿವರು ಎಚ್ಚರಿಕೆ ನೀಡಿದರು.

**ನೆಟೆರೋಗದಿಂದ ತೊಗರಿಬೆಳೆ ಹಾನಿಗೆ ಶೀಘ್ರದಲ್ಲೇ ಪರಿಹಾರ ಬಿಡುಗಡೆ**

2022–23ನೇ ಸಾಲಿನಲ್ಲಿ ನೆಟೆ ರೋಗದಿಂದ ಕಲಬುರಗಿ ಜಿಲ್ಲೆಯಲ್ಲಿ 198488 ಹೆಕ್ಟೇರ್, ಬೀದರ್ ಜಿಲ್ಲೆಯಲ್ಲಿ 14495 ಹೆಕ್ಟೇರ್, ವಿಜಯಪುರ ಜಿಲ್ಲೆಯಲ್ಲಿ 20401 ಹೆಕ್ಟೇರ್, ಯಾದಗಿರಿ ಜಿಲ್ಲೆಯಲ್ಲಿ 10259 ಪ್ರದೇಶದಲ್ಲಿ ತೊಗರಿ ಬೆಳೆ ಹಾನಿಯಾಗಿರುತ್ತದೆ. ಹಾನಿಗೊಳಗಾದ ರೈತರಿಗೆ ಪ್ರತಿ ಹೆಕ್ಟೇರ್ 10 ಸಾವಿರ ಪರಿಹಾರದಂತೆ ಗರಿಷ್ಠ ಎರಡು ಹೆಕ್ಟೇರ್‌ಗೆ ಸೀಮಿತಗೊಳಿಸಿ ಸರ್ಕಾರದಿಂದ 223 ಕೋಟಿಗಳ ಅನುದಾನ ಘೋಷಿಸಲಾಗಿದ್ದು, ಶೀಘ್ರದಲ್ಲೇ ಪರಿಹಾರ ವಿತರಣೆಗೆ ಕ್ರಮವಹಿಸಲಾಗುವುದು ಎಂದು ಸಚಿವ ಚಲುವರಾಯಸ್ವಾಮಿ ಅವರು ತಿಳಿಸಿದರು.

**ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ**

ಕೃಷಿ ಇಲಾಖೆಯಲ್ಲಿ ಶೇ.58% ನಷ್ಟು ಹುದ್ದೆಗಳು ಖಾಲಿಯಿದ್ದು, ಯೋಜನೆಗಳನ್ನು ಪರಿಣಾಮಕಾರಿಯಾಗಿ ರೈತರಿಗೆ ತಲುಪಿಸಲು ವಿಳಂಬ ಆಗಲಿದೆ. ಆ ನಿಟ್ಟಿನಲ್ಲಿ ಖಾಲಿಯಿರುವ ಹುದ್ದೆಗಳ ಭರ್ತಿ ಅವಶ್ಯವಿದೆ. ಹಾಗಾಗಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು. ಕೃಷಿ ಇಲಾಖೆಗೆ ಒಟ್ಟು 8982 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 3787 ಹುದ್ದೆಗಳು ಭರ್ತಿಯಾಗಿವೆ. 5195 ಹುದ್ದೆಗಳು ಖಾಲಿ ಇರುತ್ತವೆ.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಇಲಾಖೆಯ ಕಾರ್ಯದರ್ಶಿ ಶಿವಯೋಗಿ ಕಳಸದ್ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನೆಗೆ ಅತ್ತೆಯೇ ಸಿನಿಯರ್, ಅತ್ತೆ ಒಪ್ಪಿದ್ರಷ್ಟೇ ಸೊಸೆಗೆ 2,000: ಸಚಿವ ಲಕ್ಷ್ಮೀ ಹೆಬ್ಬಾಳಕರ



ಬೆಳಗಾವಿ: ಗೃಹಲಕ್ಷ್ಮಿ ಯೋಜನೆಗೆ ಷರತ್ತು ಅನ್ವಯಿಸುತ್ತೆ. ಮನೆಗೆ ಅತ್ತೆಯೇ ಸೀನಿಯರ್, ಆದ್ರಿಂದ ಗೃಹಲಕ್ಷ್ಮಿ ಯೋಜನೆ ಯಾರಿಗೆ ಬೇಕೆಂದು ಅತ್ತೆಯನ್ನು ಕೇಳುತ್ತೇವೆ. ಅತ್ತೆ ನನ್ನ ಬದಲು ಸೊಸೆಗೆ ಯೋಜನೆ ಕೊಡಿ ಅಂದ್ರೆ ‘ಗೃಹಲಕ್ಷ್ಮಿ’ ಯೋಜನೆ ಸೊಸೆಗೆ ಸಿಗುತ್ತದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆ ಜಾರಿ ಸಂಬಂಧ ನಗರದ ಸುವರ್ಣ ಸೌಧದಲ್ಲಿ ಮಾತನಾಡಿದ ಅವರು, ಬಹಳಷ್ಟು ಸರಳವಾಗಿ ಯೋಜನೆ ಜಾರಿಗೆ ತರುವ ಚಿಂತನೆ ಇದೆ. ಇಲಾಖೆ ಮಂತ್ರಿಗಳು ಮತ್ತು ಅಧಿಕಾರಿಗಳ ಸಭೆಯನ್ನು ಸಿಎಂ ಸಿದ್ದರಾಮಯ್ಯ ಕರೆದಿದ್ದಾರೆ. ನಮ್ಮ ಇಲಾಖೆಯ ಜೊತೆ ಆರ್ಡಿಪಿಆರ್, ಕಂದಾಯ ಇಲಾಖೆ ಅಧಿಕಾರಿಗಳ ಸಭೆಯೂ ನಡೆಯಲಿದೆ ಎಂದು ಹೇಳಿದರು.

ಈ ವೇಳೆ ಗೃಹಲಕ್ಷ್ಮಿ ಯೋಜನೆಯನ್ನ ಅತ್ತೆಗೆ ಕೊಡಬೇಕೋ? ಸೊಸೆಗೆ ಕೊಡಬೇಕೋ ಎಂಬ ಪ್ರಶ್ನೆಗೆ ದನಿಗೂಡಿಸಿದ ಸಚಿವ ಸತೀಶ್ ಜಾರಕಿಹೊಳಿ, ಯಾರಿಗೆ ಕೊಡಬೇಕು ಎಂಬುದಕ್ಕೆ ಷರತ್ತು ಅನ್ವಯವಾಗುತ್ತದೆ. ಅತ್ತೆ ಸ್ವಯಂಪ್ರೇರಿತವಾಗಿ ಸೊಸೆಗೆ ಕೊಡುತ್ತೇನೆ ಅಂದರೆ ಆ ಕಂಡಿಷನ್ ಇಲ್ಲಿ ಅನ್ವಯಿಸುತ್ತೆ. ಗೃಹಲಕ್ಷ್ಮಿ ಯೋಜನೆ ಯಾರಿಗೆ ಬೇಕೆಂದು ಮೊದಲು ಅತ್ತೆಯನ್ನ ಕೇಳುತ್ತೇವೆ. ನನ್ನ ಬದಲು ಸೊಸೆಗೆ ಯೋಜನೆ ನೀಡಿ ಅಂದ್ರೆ ಗೃಹಲಕ್ಷ್ಮಿ ಯೋಜನೆ ಸೊಸೆಗೆ ಕೊಡುತ್ತೇನೆ. ಮೊದಲ ಆದ್ಯತೆಯನ್ನ ಮನೆಯಲ್ಲಿ ಅತ್ತೆಗೆ ಕೊಡುತ್ತೆವೆ. ಅತ್ತೆ ಪ್ರೀತಿಯಿಂದ ಸೊಸೆಗೆ ಕೊಡುವುದಾದರೆ ಕೊಡಲಿ. ಹಾಗೆ ಕೊಡುವುದಾದರೆ ಅತ್ತೆ ಲಿಖಿತ ರೂಪದಲ್ಲಿ ಬರೆದುಕೊಡಬೇಕು ಎಂದಿದ್ದಾರೆ. ಇದಕ್ಕೆ ದನಿಗೂಡಿಸಿದ ಲಕ್ಷ್ಮಿ ಹೆಬ್ಬಾಳ್ಕರ್, ಮನೆಗೆ ಅತ್ತೆಯೇ ಸೀನಿಯರ್, ಹೀಗಾಗಿ ಅತ್ತೆಗೆ ಯೋಜನೆ ಕೊಡುವುದು ನಮ್ಮ ಆದ್ಯತೆ. ನಮ್ಮ ಸಂಸ್ಕೃತಿ ಪ್ರಕಾರ ಮನೆಗೆ ಅತ್ತೆಯೇ ಯಜಮಾನಿ. ಅತ್ತೆಯೇ ಪ್ರೀತಿಯಿಂದ ಸೊಸೆಗೆ ಹಣ ಕೊಡಬೇಕು ಎಂಬುದು ನಮ್ಮ ಆಶಯ ಎಂದು ಹೇಳಿದ್ದಾರೆ.

# ಮಾಜಿ ಶಾಸಕ ಶ್ರೀಮಂತ ಪಾಟೀಲರಿಂದ ಕೃತಜ್ಞತೆ ಹಾಗೂ ಆತ್ಮಾವಲೋಕನ ಸಮಾರಂಭದ ಆಯೋಜನೆ



ಕಾಗವಾಡ: ಕಳೆದ ಎರಡು ಚುನಾವಣೆಗಳಲ್ಲಿ ಕಾಗವಾಡ ಮತಕ್ಷೇತ್ರದ ಮತದಾರ ಬಾಂಧವರು ನನಗೆ ಆಶೀರ್ವಾದ ಮಾಡಿದ್ದರಿಂದ ನಾವು ನಮ್ಮ ಕಾಗವಾಡ ಮತಕ್ಷೇತ್ರದಲ್ಲಿ ಇಷ್ಟೊಂದು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಸಾಧ್ಯವಾಗಿದ್ದು, ನಾವು ನಮ್ಮ ಅವಧಿಯಲ್ಲಿ ಶಿಕ್ಷಣ, ರಸ್ತೆ, ನೀರಾವರಿಗೆ ಹೆಚ್ಚಿನ ಆದ್ಯತೆ ನೀಡಿ, ನಮ್ಮಿಂದ ಆದಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇವೆ ಎಂದು ಕಾಗವಾಡ ಮತಕ್ಷೇತ್ರದ ಮಾಜಿ ಶಾಸಕ ಶ್ರೀಮಂತ ಪಾಟೀಲರು ಹೇಳಿದರು.ಸೋಮವಾರ ಸಂಜೆ ಶಾಸಕರ ಪ್ರಧಾನಕಚೇರಿಯಾದ ಕೆಂಪವಾಡ ಸಕ್ಕರೆ ಕಾರ್ಖಾನೆಯ ಸಭಾ ಭವನದಲ್ಲಿ ಕೃತಜ್ಞತೆ ಹಾಗೂ ಆತ್ಮಾವಲೋಕನ ಸಮಾರಂಭ ಹಮ್ಮಿಕೊಂಡಿದ್ದರು. ಸಭೆಯಲ್ಲಿ ಕಾರ್ಯಕರ್ತರನುದ್ದೇಶಿಸಿ ಮಾತನಾಡಿದರು.

ಕಾಗವಾಡ ಮತಕ್ಷೇತ್ರದ ಶಾಸಕನಾಗಿ ಹಾಗೂ ರಾಜ್ಯದ ಸಚಿವನಾಗಿ ಸೇವೆ ಮಾಡಲು ಕಾಗವಾಡ ಮತಕ್ಷೇತ್ರದ ಮತದಾರರು ಆಶೀರ್ವದಿಸಿದ್ದರು. ಆದರೆ, ಈ ಚುನಾವಣೆಯಲ್ಲಿ 75 ಸಾವಿರ ಮತದಾರರು ಮತಚಲಾಯಿಸಿದ್ದರೂ ಸ್ವಲ್ಪದರಲ್ಲಿಯೇ ನನ್ನ ಸೋಲಾಯಿತು.

ಆದರೆ ದಯವಿಟ್ಟು ನಮ್ಮ ಕಾರ್ಯಕರ್ತರು ಹಾಗೂ ಅಭಿಮಾನಿ ಬಳಗದವರು ಯಾರು ಧೃತಿಗೆಡಬೇಡಿ.ನಿಮ್ಮ ಕೆಲಸ ಕಾರ್ಯಗಳು ಏನೇ ಇದ್ದರೂ ನೇರವಾಗಿ ನಮ್ಮನ್ನು ಸಂಪರ್ಕಿಸಿ ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸಲು ನಾನು ಸದಾ ಸಿದ್ಧನಿದ್ದೇನೆ.

ನಾವು ಗಡಿಭಾಗಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಮಹತ್ವದ ಯೋಜನೆಯಾದ ಖಿಳೇಗಾವ ಶ್ರೀ ಬಸವೇಶ್ವರ ಏತ ನೀರಾವರಿ ಯೋಜನೆಗಾಗಿ ಹಗಲಿರುಳು ಶ್ರಮಪಟ್ಟು ಈ ಯೋಜನೆಯ ಮುಕ್ತಾಯದ ಹಂತದಲ್ಲಿ ಪೂರ್ಣಗೊಳಿಸಿದ್ದೇವೆ, ನಮ್ಮ ಐದು ವರ್ಷದಲ್ಲಿ ನಾವು ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ನಮ್ಮ ಮತಕ್ಷೇತ್ರದ ಸುಮಾರು 75 ಸಾವಿರ ಮತದಾರ ಬಾಂಧವರು ಆಶೀರ್ವಾದ ನೀಡಿದ್ದೀರಿ.

ನಿಮ್ಮೆಲ್ಲರಿಗೂ ಕೋಟಿ ಕೋಟಿ ಧನ್ಯವಾದಗಳನ್ನು ಕೋರುತ್ತೇನೆ ಎಂದರು.

ಹಿರಿಯ ನ್ಯಾಯವಾದಿಗಳಾದ ಅಭಯಕುಮಾರ ಅಕಿವಾಟೆ ಮಾತನಾಡುವಾಗ, ಕಾಗವಾಡ ಮತಕ್ಷೇತ್ರದಲ್ಲಿ ಈ ಹಿಂದೆ 20 ವರ್ಷಗಳಿಂದ ಮಾಡದೇ ಇರುವಂತಹ ಅಭಿವೃದ್ಧಿ ಕಾರ್ಯಗಳನ್ನು ಕೇವಲ ನಾಲ್ಕೈದು ವರ್ಷಗಳಲ್ಲಿ ಮಾಡಿದ್ದಾರೆ.

ಈ ನಮ್ಮ ಕಾಗವಾಡ ಮತಕ್ಷೇತ್ರವನ್ನು ಎಲ್ಲ ವಿಭಾಗದಲ್ಲಿ ಅಭಿವೃದ್ಧಿಗೊಳಿಸಿ, ಕ್ಷೇತ್ರದಲ್ಲಿ ಯಾವುದೇ ಜಾತಿ ಭೇದ ಭಾವ ಮಾಡದೆ ಎಲ್ಲ ಸಮುದಾಯದವರನ್ನು ಒಂದಾಗಿ ಕಂಡಿರುವ ಸ್ವಚ್ಛ–ಸರಳ ಹಾಗೂ ಪ್ರಾಮಾಣಿಕ ಶಾಸಕರ ಸೋಲಿನಿಂದ ಮತಕ್ಷೇತ್ರಕ್ಕೆ ಹಾನಿಯಾಗಿದೆ ಎಂದರು.

# ಸಿಡಿಲು ಬಡಿದು ಇಪ್ಪತ್ತಕ್ಕೂ ಹೆಚ್ಚು ಮೇಕೆಗಳ ಸಾವು



ವಿಜಯಪುರ: ವಿಜಯಪುರ ಜಿಲ್ಲೆ ದೇವರಹಿಪ್ಪರಗಿ ತಾಲೂಕಿನ ಭಾಗಗಳಲ್ಲಿ ಸಿಡಿಲು ಸಹಿತ ಮಳೆಯಾದ ಪರಿಣಾಮವಾಗಿ ಸಿಡಿಲು ಬಡಿದು ಇಪ್ಪತ್ತಕ್ಕೂಹೆಚ್ಚು ಮೇಕೆಗಳ ಸಾವನ್ನಪ್ಪಿವೆ. ದೇವರ ಹಿಪ್ಪರಗಿ ತಾಲೂಕಿನ ಸಲಾದಹಳ್ಳಿ ಗ್ರಾಮದಲ್ಲಿ ಘಟನೆ ನಡೆದು ಕುರಿಗಾಹಿಗಳಾದ ಶಂಕರಪ್ಪ ವಾಲಿಕಾರ್ ಹಾಗೂ ಪರಸಪ್ಪ ಚೌಡಕಿ ಎಂಬುವರಿಗೆ ಸೇರಿದ ಮೇಕೆಗಳು ಸಾವನ್ನಪ್ಪಿವೆ. ಮೇಕೆಗಳನ್ನ ಕಳೆದುಕೊಂಡು

ಕುರಿಗಾಹಿಗಳು ಕಂಗಾಲಾಗಿದ್ದಾರೆ. ಸಿಡಿಲಿಗೆ ಬಲಿಯಾದ ಮೇಕೆಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿದ್ದಾರೆ.ದೇವರ ಹಿಪ್ಪರಗಿ ಪೊಲೀಸ್ ಠಾಣಾ ವ್ಯಾಪ್ತಿ ಘಟನೆ ನಡೆದಿದೆ.

# ನೇಣು ಬಿಗಿದುಕೊಂಡುಯುವಕ ಆತ್ಮಹತ್ಯೆ



ಬೆಳಗಾವಿ: ಗ್ರಾಮದ ಹೊರವಲಯದ ತೋಟದ ಪಟ್ಟಿಯಲ್ಲಿ ಯುವನೊಬ್ಬ ನೇಣು ಹಾಕಿಕೊಂಡು ಸಾವನ್ನಪ್ಪಿರುವ ಘಟನೆ ಹುಕ್ಕೇರಿ ತಾಲೂಕಿನ ಎಲಿಮುನ್ನೋಳಿ ಗ್ರಾಮದಲ್ಲಿ ನಡೆದಿದೆ.

ಎಲಿಮುನ್ನೋಳಿ ಗ್ರಾಮದ ಅಪ್ಪಾಸಾಹೇಬ (40) ನೇಣಿಗೆ ಶರಣಾದ ಯುವಕ. ಬೆಳಗಿನ ಜಾವ ಹೊಲಕ್ಕೆ ಹೋಗುವ ಜನರು ಶವ ನೋಡಿ ನೋಡಿ ಗ್ರಾಮಸ್ಥರಿಗೆ ಮಾಹಿತಿ ನೀಡಿದ್ದಾರೆ.

ಅಪ್ಪಾಸಾಹೇಬ ಕಾಂಬಳೆ ಸಾವಿಗೆ ಹಲವು ಅನುಮಾನಗಳು ಕಂಡು ಬರುತ್ತಿವೆ ಎಂದು ಸ್ಥಳಿಯರು ಹಾಗೂ ಸಂಬಂದಿಕರು ಆರೋಪಿಸಿದ್ದಾರೆ. ಈ ಕುರಿತು ಹುಕ್ಕೇರಿ ಪೊಲೀಸ್ ಠಾನೆಯಲ್ಲಿ ಪ್ರಕರಣ ದಾಖಲಗಿದೆ.

# ಮಕ್ಕಳ ಪ್ರತಿಭೆಗೆ ಪಾಲಕರು ಪ್ರೋತ್ಸಾಹ ಅಗತ್ಯ




ಧಾರವಾಡ: ಮಕ್ಕಳ ಪ್ರತಿಭೆಗೆ ಪಾಲಕರು ಪ್ರೋತ್ಸಾಹ ನೀಡಬೇಕು, ಮಕ್ಕಳಲ್ಲಿ ಪ್ರತಿಭೆ ಇದ್ದರೆ ಮಾತ್ರ ಗುರುತಿಸಲು ಸಾಧ್ಯ ಎಂದು ಮಕ್ಕಳ ಸಾಹಿತಿಗಳು ಹಾಗೂ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಮಾಜಿ ಅಧ್ಯಕ್ಷ ಶಂಕರ ಹಲಗತ್ತಿ ಅವರು ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಭವನದಲ್ಲಿ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಾಗೂ ಜಿಲ್ಲಾ ಬಾಲಭವನ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಲ್ಲಿ ಆಸಕ್ತಿಯನ್ನು ಬೆಳೆಸಬೇಕು, ಮಕ್ಕಳ ಮಾನಸಿಕ ಒತ್ತಡಗಳನ್ನು ಕಂಡುಹಿಡಿದು ಅವುಗಳಿಗೆ ಪರಿಹಾರ ನೀಡಬೇಕು. ಕಲೆಯನ್ನು ಕೊಲೆ ಮಾಡಬೇಡಿ ಕಲೆಗೆ ಪ್ರೋತ್ಸಾಹಿಸಿ. ಮಕ್ಕಳಿಗೆ ಒಳ್ಳೆಯ ಮಾರ್ಗದರ್ಶನ ಮಾಡುವುದು ನಮ್ಮೆಲ್ಲರ ಹೊಣೆ. ಮಕ್ಕಳಲ್ಲಿ ಆಗಾಧವಾದ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಮಾಡಬೇಕಾಗಿದೆ.

ಪ್ರತಿಯೊಬ್ಬ ಪಾಲಕರು ಅರಿಯಬೇಕು. ಈ ನಿಟ್ಟಿನಲ್ಲಿ ಸರ್ಕಾರ ಮಕ್ಕಳಿಗೆ ರೂಪಿಸಿದ ಯೋಜನೆಗಳನ್ನು ಹಾಗೂ ಕಾರ್ಯ ಕ್ರಮಗಳನ್ನು ಪಾರದರ್ಶಕ ವಾಗಿ ಅನುಷ್ಠಾನಗೊಳಿಸವ ಪ್ರಕ್ರಿಯೆ ನಿರಂತರ ನಡೆಯಬೇಕು ಎಂದು ಅವರು ಹೇಳಿದರು.

ಮಕ್ಕಳ ಸಾಹಿತಿ ನಿಂಗಣ್ಣ ಕುಂಟಿ ಅವರು ಮಾತನಾಡಿ, ಮಕ್ಕಳ ಕಲೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ, ಮಕ್ಕಳ ಪ್ರಶ್ನೆಗಳಿಂದ ನಮಗೆ ಅವಮಾನವಲ್ಲ ಅವರ ಪ್ರಶ್ನೆಗಳೇ ನಮಗೆ ಸನ್ಮಾನ. ಮಕ್ಕಳಿಗೆ ಕಲಿಸಬೇಕಾಗಿಲ್ಲ ಮಕ್ಕಳಿಂದ ನಾವು ಕಲಿಯುವುದು ಬಹಳ ಇದೆ.

15 ದಿನಗಳ ಕಾಲ ಶ್ರಮಪಟ್ಟು ಮಕ್ಕಳಿಗೆ ತರಬೇತಿ ನೀಡಲಾಗಿದೆ ಎಂದು ಅವರು ಹೇಳಿದರು.

ಜಿಲ್ಲಾ ಬಾಲಭವನ ಕಾರ್ಯದರ್ಶಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಡಾ.ಎಚ್.ಎಚ್. ಕುಕನೂರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಸಮಯವನ್ನು ವ್ಯರ್ಥಮಾಡದೇ ತಮಗೆ ಆಸಕ್ತಿ ಇರುವ ಚಟುವಟಿಕೆಗಳಲ್ಲಿ ಮಗ್ನರಾಗಿ ಅಭ್ಯಾಸ ಮಾಡಬೇಕು. ಮಕ್ಕಳಲ್ಲಿ ಸತತ ಪ್ರಯತ್ನ ಇದ್ದರೆ ಯಶಸ್ಸುಗೊಳಿಸಲು ಸಾಧ್ಯ ಎಂದು ಮಕ್ಕಳಿಗೆ ಕಿವಿ ಮಾತು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಅನುಪಮಾ ಅಂಗಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಕಾಂಚನ ಅಮತೇ ಮತ್ತು ಇಲಾಖೆಯ ಶಿಬ್ಬಂದಿಗಳು ಉಪಸ್ಥಿತರಿದ್ದರು.

ಬಸವರಾಜ ಗುಡ್ಡಪ್ಪನವರು ನಿರೂಪಿಸಿದರು, ಮಂಜುಳ ಪಾಟೀಲ ಸ್ವಾಗತಿಸಿದರು, ಕೃಷ್ಣಮೂರ್ತಿ ಕಟ್ಟಿಮನೆ ಪ್ರಾರ್ಥಿಸಿದರು, ನಿರ್ಮಲ ಭುಜಂಗನವರ ವಂದಿಸಿದರು.

# ಒಬ್ಬ ವ್ಯಕ್ತಿಯಾಗಲಿ, ಒಂದು ವಸ್ತುವಾಗಲಿ ನಮ್ಮ ಹತ್ತಿರ ಇದ್ದಾಗ ತಿಳಿಯದ ಬೆಲೆ ಇಲ್ಲವಾದಾಗ ತಿಳಿದರೇನು ಫಲ

**ಅಪ್ಪಾ......ನೀನು ನನಗೊಸ್ಕರ ಏನಪ್ಪಾ ಮಾಡಿದಿಯಾ?? ಎಲ್ಲರೂ ಮಾಡೋದನ್ನೆ ತಾನೆ ಮಾಡಿರೋದು??**

ಚಿಕ್ಕೋನಿದ್ದಾಗ ಎತ್ಕೊಂಡೆ, ಮುದ್ ಮಾಡಿದೆ ಕೇಳಿದ್ದೆಲ್ಲಾ ಕೊಡಸ್ದೆ ಅಂತಾ ಮಾತ್ ಮಾತಿಗೂ ಹೇಳ್ತಾನೆ ಇರ್ತಿಯಾ. ಜಗತ್ತಲ್ಲಿ ಯಾವ ಅಪ್ಪಂದ್ರು ಮಾಡ್ದೆ ಇರೋ ಹಂತದ್ದು ಏನ್ ಮಾಡಿದಿಯಾ?? ಅಂತ ವಸಂತ ಅಪ್ಪನ ಮೇಲೆ ರೇಗಾಡತೊಡಗಿದ್ದ.

ಅಮ್ಮಾ ಎಷ್ಟ ಸಾರಿ ಹೇಳಿದಿನಿ ನೆಂಟರ ಮುಂದೆ ನನ್ನ ಮದ್ವೆ ವಿಷಯ ಮಾತಾಡಬೇಡ ಅಂತ. ಒಪ್ಕೋತಿನಿ ನಾನು ಚಿಕ್ಕೋಳಿದ್ದಾಗ್ಲೆ ಅಪ್ಪ ತೀರ್ ಹೋದ್ರು ಆಮೇಲೆ ಕಷ್ಟ ಪಟ್ಟು ಬೆಳಸಿದಿಯಾ ಅಂತ.ಆದ್ರೆ ಯಾಕಮ್ಮ ಅದನ್ನೆ ಮತ್ತೆ ಮತ್ತೆ ಹೇಳಿ ನನ್ನ ಜೀವ ತಿಂತಿಯಾ ಅಂತ ಅಮ್ಮನ ಮೇಲೆ ಮಾತಿನ ಪ್ರಹಾರ ಮಾಡುತ್ತಿದ್ದಳು ನಳೀನಿ.

ನೋಡು ರಮ್ಯಾ ನಿಂಗೆನ್ ಬೇಕೋ ತಗೊಂಡ್ ಹೋಗಿ ಬಿಡು ತಮ್ಮ ಅದಿ ಅನ್ನೂದ ಮರ್ತು ಅರಾಮ್ ಇರ್ತೇವಿ.ನಿನಗ ಬುದ್ದಿ ಹೇಳಿ ಹೇಳಿ ಸಾಕಾಗೇತಿ ಅಂತ ಮಹೇಶ್ ಅನ್ನುತ್ತಿದ್ದಂತೆಯೆ ಅವನು ತನ್ನ ಅಣ್ಣ ಅನ್ನುವದನ್ನ ಮರೆತ ರಮೇಶ್ ನಿನಗಿಂತ ಮೊದ್ಲು ನಾನು ಹುಟ್ಟಿದ್ರೆ ನಾನು ಇದನ್ನೆ ಮಾಡ್ತಿದ್ದೆ ಮಾತ್ ಮಾತಿಗೆ ಏನೋ ದೊಡ್ ತ್ಯಾಗ ಮಾಡಿರೋರ್ ಥರಾ ಮಾತಾಡ್ತಿಯಾ ಯಾವ ಅಣ್ಣಂದ್ರು ಮಾಡದೆ ಇರೋ ಹಂತದ್ದು ಎನಣ್ಣ ಮಾಡಿದ್ದೀಯಾ ಅಂತ ರಮೇಶ್ ಸಿಟ್ಟಿನಿಂದ ಮಾತನಾಡ ತೊಡಗಿದ್ದ.

ಹೀಗೆ ಬದುಕಿನ ಜಂಝಾಟಕ್ಕೆ ಸಿಲುಕಿ ಹೆತ್ತ ತಂದೆ ತಾಯಿ ಒಡ ಹುಟ್ಟಿದ ಅಕ್ಕ,ಅಣ್ಣ ಅಥವಾ ತಮ್ಮ ತಂಗಿಯ ಜೊತೆಗೆ ಆಗಾಗ ಬಹುತೇಕ ಮನೆಗಳಲ್ಲಿ ವಾದ,ವಿವಾದ,ಸಣ್ಣ ಜಗಳ,ಚಿಕ್ಕ ಮುನಿಸು ತಾಂಡವ ಆಡುತ್ತಲೇ ಇರುತ್ತದೆ.



ಬಹಳಷ್ಟು ಸಲ ಪರಿಸ್ಥಿತಿಯ ವಾಸ್ತವವನ್ನೆ ಅರಿಯದ ಮನಸ್ಥಿತಿಯಲ್ಲಿ ಸ್ವಾರ್ಥಿಗಳಾಗಿ ನಮಗಿಂತ ಹಿರಿಯರಿಗೋ, ನಮಗಿಂತ ಕಿರಿಯರಿಗೋ ಬಾಯಿಗೆ ಬಂದಂತೆ ಮಾತನಾಡಿ ಬಿಟ್ಟಿರುತ್ತೇವೆ.

ಆದರೆ ಅವರಿಲ್ಲ ಅನ್ನುವ ವೇಳೆಗೆ ಅವರ ಅನುಪಸ್ಥಿತಿ ನಿಧಾನಕ್ಕೆ ನಮ್ಮ ಮನಸ್ಸನ್ನು ಕಾಡತೊಡಗುತ್ತದೆ.

ಪುಟ್ಟದೊಂದು ನೌಕರಿ ಹಿಡಿದು, ಚಿಕ್ಕದೊಂದು ಮನೆ ಕಟ್ಟಿದಾಗ ಗೃಹ ಪ್ರವೇಶದ ವೇಳೆಗೋ ಅಥವಾ ಸೆಕೆಂಡ್ ಹ್ಯಾಂಡ್ ಕಾರು ತಂದು ಮನೆಯ ಮುಂದೆ ಪೂಜೆ ಮಾಡುವಾಗಲೋ ತೀರಿ ಹೋದ ಅಪ್ಪ,ಮನೆ ಬಿಟ್ಟು ಹೋದ ತಮ್ಮ,ಅಥವಾ ಅಕಾಲಿಕ ನಿಧನವಾದ ಮನೆಯ ಸದಸ್ಯರು ನೆನಪಾಗಿ ಕಣ್ಣು ಮಂಜಾಗಿ ಬಿಟ್ಟಿರುತ್ತವೆ.

ನಮ್ಮದೇ ಆಫೀಸಿನಲ್ಲಿ ಜೊತೆಗೆ ದುಡಿಯುತ್ತಿದ್ದರೂ ಎಂದೂ ಆಪ್ತವಾಗಿ ಮಾತನಾಡಿಸದೆ ಅಥವಾ ಚಹಾ ವಿರಾಮದಲ್ಲಿ ಜೊತೆಗೆ ಹೋಗಿ ಅರ್ಧ ಕಪ್ಪು ಚಹ ಕುಡಿಯದೇ, ರಾಮಪ್ಪ ಹ್ಯಾಗಿದೀರಿ ಮಗಳ ಮದುವೆ ಯಾವಾಗ ಅಂತಲೂ ಕೇಳದೆ ಯಾರೋ ಒಬ್ಬರನ್ನ ಕಡೆಗಣಿಸುತ್ತಲೋ ಅಥವಾ ನಾವು ಅವರಿಗಿಂತ ಮೇಲಾಧಿಕಾರಿ ಅನ್ನುವ ಅಹಂಕಾರದಿಂದ ಕೇವಲ ಕೆಲಸದ ಆಳಾಗಿ ಕಾಣುತ್ತಲೋ ಉಳಿದು ಬಿಟ್ಟಾಗಲೇ ನಿವೃತ್ತಿ ಹೊಂದಿದ ಜವಾನ ಇದ್ದಕ್ಕಿದ್ದಂತೆ ನೆನಪಾಗಿ ಬಿಡುತ್ತಾನೆ.

ಶಾಲೆಯ ಹೆಡ್ ಮಾಸ್ಟರ್ ಹೊಡಿತಾರೆ ಅನ್ನುವ ಭಯದಲ್ಲೆ ಅವರನ್ನ ಕಂಡರೆ ಓಡಿ ಹೋಗಿ ತರಗತಿ ಸೇರುವ ಮತ್ತು ಪ್ರಾರ್ಥ ನೆ ವೇಳೆಗೆ ಶಾಲೆಗೆ ಹಾಜರಾಗುವ ಅಥವಾ ಉದಾಸೀನತೆ ತೋರುತ್ತ ಹಾಗೋ ಹೀಗೋ ಹೈಸ್ಕೂಲ್ ಮುಗಿಸಿ ಹೊರಗೆ ಬಂದು ಕಾಲೇಜು ಮೊಟಕುಗೊಳಿಸಿ ಕೆಲಸಕ್ಕೆ ಸೇರಿದಾಗ ಪತ್ತಾರ್ ಸರ್ ಇದ್ರಂತ ನಾವ್ ಇಷ್ಟ ಮೆಟ್ಟಿಗಿ ಹತ್ತೀವಿ ಇಲ್ಲಂದ್ರ ಎಲ್ಲಿ ಇರ್ತಿತ್ತು ಈ ಕೆಲಸ ಅಂತ ಅವರನ್ನ ನೆನೆಸಿಕೊಳ್ಳುವ ಸಮಯವೂ ಒಮ್ಮೊಮ್ಮೆ ಎದುರಾಗಿ ಬಿಡುತ್ತದೆ.

ರಸ್ತೆ ದಾಟಲು ಪರದಾಡುವ ಅಜ್ಜಿಯನ್ನ ನೋಡಿದಾಗಲೋ, ಮನೆಯ ಕಿರಾಣಿ ಖರೀದಿಸಿ ಐದು ರೂಪಾಯಿ ಚಿಲ್ಲರೆಗೆ ಜೇಬು ತಡಕಾಡುವ ಮಧ್ಯವಯಸ್ಕ ಗಂಡಸನ್ನು ನೋಡಿದಾಗಲೋ, ಯಾರದೋ ಮನೆಯಲ್ಲಿ ಕಸಮುಸುರೆ ಮಾಡುವ ಕೆಲಸದ ಹೆಂಗಸನ್ನು ನೋಡಿದಾಗಲೋ ನಮ್ಮ ಬಾಲ್ಯದ ಕಾಲದಲ್ಲಿ ಹೀಗೆಯೆ ಕಷ್ಟ ಪಟ್ಟಿರಬಹುದಾದ ಅಪ್ಪ, ಅಮ್ಮ, ಅಜ್ಜಿ, ಅಜ್ಜನ ನೆನಪುಗಳು ಕೂಡ ಇದ್ದಕ್ಕಿದ್ದಂತೆ ಕಾಡಿ ಬಿಡುತ್ತವೆ.

ಮನುಷ್ಯ ಹುಟ್ಟಿದ ಮೇಲೆ ಸಾಯಲೇಬೇಕು ಅನ್ನುವ ಮಾತನ್ನ ಮತ್ಯಾರೋ ತೀರಿಕೊಂಡಾಗ ಮಾತನಾಡುವ ಅಥವಾ ಅವರ ಒಳ್ಳೆಯ ಮತ್ತು ಕೆಟ್ಟ ಸ್ವಭಾವಗಳ ಗುಣಗಾನ ಮಾಡುವ ನಾವು ನೀವೆಲ್ಲ ಎಷ್ಟರ ಮಟ್ಟಿಗೆ ನಾವು ಇನ್ನೊಬ್ಬರ ಜೊತೆಗೆ ಚೆನ್ನಾಗಿದ್ದೀವಿ ಅಂತ ಯೋಚಿಸುವದೆ ಇಲ್ಲ.

ಹಣವಾಗಲಿ, ಅಧಿಕಾರವಾಗಲಿ, ಮಾನ ಸಮ್ಮಾನಗಳಾಗಲೀ, ಕೊನೆಗೆ ಈ ಬದುಕಾಗಲೀ ಯಾವುದೂ ಶಾಸ್ವತ ಅಲ್ಲ ಅನ್ನುವದನ್ನ ಮರೆತು ವ್ಯಕ್ತಿಯಾಗಲೀ,ವಸ್ತುವಾಗಲಿ ನಮ್ಮ ಹತ್ತಿರ ಇಲ್ಲವಾದಾಗಲೇ ಇನ್ನಷ್ಟು ದಿನ ಇರಬೇಕಾಗಿತ್ತು ಅಂತ ಪರಿತಪಿಸುವ ಬದಲು ಇದ್ದಾಗ ಚೆನ್ನಾಗಿ ನೋಡಿಕೊಳ್ಳೋಣ ಅಲ್ಲವಾ??

ನೆನಪಿರಲಿ ತೂತು ಒಲೆ ಕೆಡಿಸಿದರೆ ಮಾತು ಮನೆ ಕೆಡಿಸುತ್ತದೆ ಆದ್ದರಿಂದ ಮಾತುಗಳು ಮೆದುಳಿನಿಂದ ನಾಲಿಗೆಗೆ ಬರದೆ ಹೃದಯದಿಂದ ನಾಲಿಗೆಗೆ ಬಂದು ಮತ್ತೊಬ್ಬರ ಮನಸ್ಸನ್ನು ನೋಯಿಸದಿರಲಿ ಅಲ್ಲವಾ??

ಬಿಟ್ಟ ಬಾಣವಾಗಲಿ ನೆಟ್ಟ ನೋಟವಾಗಲಿ ಆಡಿದ ಮಾತಾಗಲೀ ಎಂದೂ ಮರಳಿ ಬರುವದಿಲ್ಲ ಅಂದಮೇಲೆ ನಮ್ಮ ಮಾತುಗಳು ಮತ್ತೊಬ್ಬರ ಮನಸ್ಸಿಗೆ ಕಹಿಯಾಗಿ ನಾಟದೆ ಸಿಹಿಯಾಗಿ ಪರಿಣಮಿಸಿ ಸಂಭಂಧಗಳನ್ನ ಗಟ್ಟಿಗೊಳಿಸಲಿ ಅನ್ನುವ ಆಶಯದೊಂದಿಗೆ ಮತ್ತದೆ ಪರಿಚಯದ ನಗೆ,ಮತ್ತು ಕುಶಲೋಪಚಾರದ ಮಾತಿಗೆ ಕಾತರಿಸುತ್ತ ಇರುತ್ತೇನೆ.

**ದೀಪಕ ಶಿಂಧೇ**

# ಬೆಳಗಾವಿ ಜಿಲ್ಲಾ ವಿಭಜನೆಗೆ ನಾವು ಬದ್ಧ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಜಿಲ್ಲಾ ವಿಭಜನೆಗೆ ನಾವು ಬದ್ದ ಎಂದು ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಸುವರ್ಣ ವಿಧಾನಸೌಧದಲ್ಲಿ ಕರೆಯಲಾದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲಾ ವಿಭಜನೆ ಆಗಲೇಬೇಕು ಅದರಲ್ಲಿ ಪ್ರಶ್ನೆ ಇಲ್ಲಾ. ನಾವು ಮುಖ್ಯಮಂತ್ರಿಗೆ ಮನವಿ ಮಾಡುತ್ತೇವೆ, ಒತ್ತಡ ಮಾಡುತ್ತೇವೆ. ಬೆಳಗಾವಿ ಬಹಳದ ದೊಡ್ಡ ಜಿಲ್ಲೆ ಇದು, ಆಡಳಿತ ನಡೆಸುವುದು ಅಷ್ಟು ಸುಲಭ ಅಲ್ಲ. ಜಿಲ್ಲೆ ವಿಭಜನೆಯಾದರೂ ಮೂರು ಜಿಲ್ಲೆ ಒಳಗೆ ಎಂಟ್ರಿ ಇದೆ.

ಗೋಕಾಕ್ ಆದರೂ, ಚಿಕ್ಕೋಡಿ ಆದರೂ ಮೂರು ಜಿಲ್ಲೆಯಾದರೂ ನಂದು ಎಂಟ್ರಿ ಇದೆ. ಜಿಲ್ಲಾ ವಿಭಜನೆ ಕೇಳಲು ಎಲ್ಲರಿಗೂ ಹಕ್ಕಿದೆ ಎಂದರು.

# ಸಿದ್ಧಸೇನಾ ಮುನಿ ಮಹಾರಾಜರ ಆಶಿರ್ವಾದ ಪಡೆದ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಹಲಗಾ ಗ್ರಾಮದ ಬಾಲ ಆಚಾರ್ಯ ಶ್ರೀ 108 ಸಿದ್ದಸೇನಾ ಮುನಿ ಮಹಾರಾಜರನ್ನು ಮಂಗಳವಾರ ಭೇಟಿ ಮಾಡಿದ ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಅವರ ಆಶೀರ್ವಾದ ಪಡೆದುಕೊಂಡರು.

ಆರು ತಿಂಗಳ ಹಿಂದೆ ಲಕ್ಷ್ಮೀ ಹೆಬ್ಬಾಳಕರ್ ಅವರು ಸಿದ್ದಸೇನಾ ಮುನಿಗಳನ್ನು ಭೇಟಿಯಾದ ಸಂದರ್ಭದಲ್ಲಿ ಮಹಾರಾಜರು ಆಶೀರ್ವದಿಸಿ, ನೀವು ಈ ಕ್ಷೇತ್ರದ ಮೂಲಕ ಭರ್ಜರಿ ಗೆಲುವನ್ನು ಸಾಧಿಸಿ, ರಾಜ್ಯ ಸರ್ಕಾರದ ಸಂಪುಟದಲ್ಲಿ ಸಚಿವೆಯಾಗಿ ಹೊರಹೊಮ್ಮುತ್ತಿರಿ ಎಂದು ಆಶೀರ್ವಾದ ಮಾಡಿದ್ದರು ಎಂದು ನೆನಪಿಸಿಕೊಂಡ ಲಕ್ಷ್ಮೀ ಹೆಬ್ಬಾಳಕರ್, ಮಹಾರಾಜರ ಆಶೀರ್ವಾದದಿಂದ ಸಚಿವೆಯಾಗಿ ರಾಜ್ಯದ ಜನರ ಸೇವೆ ಮಾಡಲು ಅವಕಾಶ ಸಿಕ್ಕಿದೆ ಎಂದರು.

ಲಕ್ಷ್ಮೀ ಹೆಬ್ಬಾಳಕರ್ ಹಾಗೂ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

# ಪಠ್ಯಪುಸ್ತಕ ಪರಿಷ್ಕರಣೆ ಖಚಿತ, ಸಿಎಂ ನಿರ್ದೇಶನದಂತೆ ತಂಡ ರಚನೆ: ಶಿಕ್ಷಣ ಸಚಿವ ಮಧು ಬಂಗಾರಪ್ಪ

ಬೆಂಗಳೂರು: ಪಠ್ಯಪುಸ್ತಕ ಪರಿಷ್ಕರಣೆ ಮಾಡಲು ಸರ್ಕಾರ ಸಿದ್ಧವಿದ್ದು, ಮಕ್ಕಳ ಭವಿಷ್ಯ, ಮಕ್ಕಳ ಚಿಂತನೆ, ಮಕ್ಕಳ ಅವಶ್ಯಕತೆ ಇರುವ ವಿದ್ಯಾಭ್ಯಾಸ ಬಿಟ್ಟು ಬೇರೆ ಏನಾದರೂ ಪಠ್ಯದಲ್ಲಿ ಇದ್ದರೆ ಅದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಪರಿಷ್ಕರಣೆ ಮಾಡುವ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮಂಗಳವಾರ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಪ್ರಣಾಳಿಕೆಯ ಉಪಾಧ್ಯಕ್ಷನಾಗಿದ್ದೆ. ಪ್ರಣಾಳಿಕೆಯಲ್ಲಿ ಪಠ್ಯ ಪುಸ್ತಕ ಪರಿಷ್ಕರಣೆ ಬಗ್ಗೆ ಬಹಳ ಸ್ಪಷ್ಟವಾಗಿ ಹೇಳಿದ್ದೇವೆ, ಅದರಂತೆ ಮಕ್ಕಳ ಚಿಂತನೆ ಕಲ್ಮಶವಾಗಬಾರದು. ವಿದ್ಯಾಭ್ಯಾಸದಲ್ಲಿ ಅಡಚಣೆ ಆಗಬಾರದು. ಹಾಗಾಗಿ ಇದರಲ್ಲಿರುವ ತಪ್ಪುಗಳನ್ನು ಸರ್ಕಾರದ ಕಡೆಯಿಂದ, ನನ್ನ ಕಡೆಯಿಂದ ತೆರವು ಮಾಡುವ ಕೆಲಸ ಮಾಡುತ್ತೇವೆಕಂದು ಹೇಳಿದರು.

ಈಗಾಗಲೇ ಮುಖ್ಯಮಂತ್ರಿಗಳ ನಿರ್ದೇಶನದಂತೆ ತಂಡವೊಂದನ್ನು ರಚನೆ ಮಾಡಲಾಗುತ್ತಿದೆ. ಇನ್ನೆರಡು ದಿನಗಳಲ್ಲಿ ತಂಡ ರಚನೆಯಾಗಲಿದೆ ಜೂನ್.1 ಸಚಿವ ಸಂಪುಟ ಸಭೆ ನಡೆಯಲಿದೆ. ಸಭೆ ಬಳಿಕ ಈ ಬಗ್ಗೆ ಸ್ಪಷ್ಟ ಚಿತ್ರಣ ಸಿಗಲಿದೆ. ಪಠ್ಯಪುಸ್ತಕದಲ್ಲಿನ ಎಲ್ಲವನ್ನು ಕೂಡ ಪರಿಶೀಲನೆ ಮಾಡಿ, ಮಕ್ಕಳ ಭವಿಷ್ಯಕ್ಕೆ, ಮಕ್ಕಳ ಚಿಂತನೆಗೆ, ಅವಶ್ಯಕತೆ ಇರುವ ವಿದ್ಯಾಭ್ಯಾಸ ಬಿಟ್ಟು ಬೇರೆ ಏನಾದರೂ ಇದ್ದರೆ ಅದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು, ಬದಲಾವಣೆ ಮಾಡುವ ಕೆಲಸ ಮಾಡಲಾಗುತ್ತದೆ.

ಹಿಜಾಬ್ ವಿಚಾರ ಕುರಿತು ಮಾತನಾಡಿ, ಈ ಸಂಬಂಧ ಕಾನೂನುಬದ್ಧ ಹೋರಾಟ ಮುಂದು ವರೆಯಲಿದೆ. ವಿಚಾರ ನ್ಯಾಯಾಲಯದ ಅಂಗಳದಲ್ಲಿರುವುದರಿಂದ ಈ ಬಗ್ಗೆ ಹೆಚ್ಚು ಏನನ್ನೂ ಹೇಳುವುದಿಲ್ಲ. ಏನೇ ಹೋರಾಟ ಮಾಡಿದರೂ ಕಾನೂನು ಬದ್ಧವಾಗಿ ಮಾಡಲಾಗುತ್ತದೆ ಎಂದು ತಿಳಿಸಿದರು.

ಇಲಾಖೆ ಅಧ್ಯಯನ ಮಾಡಲು 2–3 ತಿಂಗಳು ಕಾಲಾವಕಾಶ ಬೇಕಾಗಿದೆ.

ಮಕ್ಕಳ ಭವಿಷ್ಯದ ವಿಚಾರವಾಗಿರುವುದರಿಂದ ಬಹಳ ಜವಾಬ್ದಾರಿಯುತವಾಗಿ ನಿರ್ಧಾರಗಳ ಕೈಗೊಳ್ಳಬೇಕಾಗಿದೆ. ಹಾಗಾಗಿ ಏನೇ ನಿರ್ಧಾರ ಮಾಡಿದರೂ ಅಧ್ಯಯನ ಮಾಡಿ ಯೋಚಿಸಿ, ಚರ್ಚಿಸಿಯೇ ನಿರ್ಧಾರ ಮಾಡುತ್ತೇವೆ. ಆತುರದ ನಿರ್ಧಾರಕ್ಕೆ ಮುಂದಾಗಲ್ಲ ಎಂದು ಸ್ಪಷ್ಟಪಡಿಸಿದರು.

ಶಾಲೆಗಳ ಆರಂಭಕ್ಕೆ ಎಲ್ಲಾ ರೀತಿಯ ಸಿದ್ಧತೆಗಳು ಪೂರ್ಣಗೊಂಡಿದೆ. ಮಕ್ಕಳನ್ನು ಸ್ವಾಗತ ಮಾಡಲು ನಮ್ಮ ಆಡಳಿತ ವರ್ಗ ಮತ್ತು ನಾವು, ಶಾಲಾ ಶಿಕ್ಷಕರು, ಎಲ್ಲರೂ ಸಿದ್ಧರಿದ್ದೇವೆ. ಶಾಲೆಗೆ ಹೋಗುತ್ತಿರುವ ಎಲ್ಲಾ ಮಕ್ಕಳಿಗೆಲ್ಲ ಶುಭ ಕೋರುತ್ತೇನೆ. ಬಹಳ ಸಂತೋಷದಿಂದ ಶಾಲೆಗಳಿಗೆ ಹೋಗಿ ಪಾಠಗಳನ್ನು ಕೇಳುವಂತೆ ಮನವಿ ಮಾಡುತ್ತೇನೆ. ಮಕ್ಕಳ ವಿದ್ಯಾಭ್ಯಾಸಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತದೆ.

ಈಗಾಗಲೇ ಅಧಿಕಾರಿ ವರ್ಗದವರ ಜೊತೆ ಸಭೆ ನಡೆಸಿದ್ದೇನೆ. ಎಲ್ಲವೂ ಸರಿ ಇದೆ. ಕೆಲವು ತ್ವರಿತ ನಿರ್ಧಾರಗಳನ್ನು ಕೈಗೊಳ್ಳಬೇಕಿದೆ. ಮುಖ್ಯಮಂತ್ರಿಗಳ ಜೊತೆ ಚರ್ಚೆ ನಡೆಸಿ ಇಂದು ಅಥವಾ ನಾಳೆ ಎರಡು ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

# ಪಾಕಿಸ್ತಾನ ಪರ ಜಯಕಾರ: ಬಂಧನಕ್ಕೆ ಆಗ್ರಹ



ಬೆಳಗಾವಿ: ರಾಜ್ಯ ವಿಧಾನಸಭೆ ಚುನಾವಣೆ ಫಲಿತಾಂಶದ ದಿನ ಪಾಕಿಸ್ತಾನ ಪರ ಘೋಷಣೆಗಳನ್ನು ಕೂಗಿದ ಅಪರಾಧಿಗಳ ಬಂಧನಕ್ಕೆ ಆಗ್ರಹಿಸಿ ಮಹಾನಗರ ಪಾಲಿಕೆ ಸದಸ್ಯರು ನಗರ ಪೊಲೀಸ್ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.

ಈ ವೇಳೆ ಹಾಜರಿದ್ದ ವಿಶ್ವಹಿಂದೂ ಪರಿಷತ್ ಮುಖಂಡ ಕೃಷ್ಣ ಭಟ್ ಮಾತನಾಡಿ, "ವಿಧಾನಸಭೆ ಚುನಾವಣೆ ಫಲಿತಾಂಶದ ದಿನವೇ ಶಿರಸಿ, ಭಟ್ಕಳ ಮೊದಲಾದೆಡೆ ಪಾಕಿಸ್ತಾನ ಪರ ಘೋಷಣೆಗಳನ್ನು ಕೂಗಲಾಗಿದೆ. ಇದು ಬೆಳಗಾವಿಯಲ್ಲೂ ನಡೆದಿದ್ದು ಘಟನೆ ನಡೆದು 15 ದಿನಗಳಾದರೂ ಆರೋಪಿಗಳನ್ನು ಬಂಧಿಸಿಲ್ಲ. ದೇಶಕ್ಕೆ ಅನೇಕ ಜನರ ತ್ಯಾಗದಿಂದ ಸ್ವಾತಂತ್ರ್ಯ ಬಂದಿದೆಯೇ ಹೊರತು ಯಾವುದೇ ವ್ಯಕ್ತಿ, ಪಕ್ಷದಿಂದಲ್ಲ. ಈ ಘಟನೆ ನೋವು ತಂದಿದ್ದು ಕೂಡಲೆ ಅಪರಾಧಿಗಳನ್ನು ಬಂಧಿಸಬೇಕು" ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ನಗರ ಪೊಲೀಸ್ ಆಯುಕ್ತ ಡಾ. ಬೋರಲಿಂಗಯ್ಯ, "ಈಗಾಗಲೇ ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದ್ದು, ಆದಷ್ಟು ಶೀಘ್ರ ಅಪರಾಧಿಗಳನ್ನು ಬಂಧಿಸಲಾಗುವುದು" ಎಂದು ಭರವಸೆ ನೀಡಿದರು.

ಪಾಲಿಕೆ ಮೇಯರ್ ಶೋಭಾ ಸೋಮನ್ನಾಚೆ, ಉಪ ಮೇಯರ್ ರೇಷ್ಮಾ ಪಾಟೀಲ, ಸವಿತಾ ಕಾಂಬಳೆ, ವೀಣಾ ಗಸ್ತಿ, ಪ್ರತಿಮಾ ಜೋಶಿ, ಸದಾಶಿವ ಹಿರೇಮಠ, ಆನಂದ ಕರಲಿಂಗಣ್ಣನವರ, ಡಾ. ನಾನಾಗೌಡ ಪಾಟೀಲ ಉಪಸ್ಥಿತರಿದ್ದರು.

# ಯುವಕನ ಮುಖಕ್ಕೆ ಬಿಸಿನೀರು ಎರಚಿ, ಬಿಯರ್ ಬಾಟಲಿಯಿಂದ ಹೊಡೆದು ಮಹಿಳೆ ಪರಾರಿ

ಬೆಂಗಳೂರು : ಬೆಂಗಳೂರು ಜಿಲ್ಲೆಯ ಚಾಮರಾಜಪೇಟೆಯಲ್ಲಿ ಮದುವೆಗೆ ನಿರಾಕರಿಸಿದ ಪ್ರಿಯಕರನ ಮೇಲೆ ಮಹಿಳೆ ಬಿಸಿ ನೀರು ಎರಚಿ ಹಲ್ಲೆ ಮಾಡಿದ ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಕಲಬುರ್ಗಿ ಜಿಲ್ಲೆಯ ಅಫಜಲಪುರ ಮೂಲದ ಮಹಿಳೆ ಇಂತಹ ಕೃತ್ಯವೆಸಗಿದ್ದಾಳೆ ಎಂದು ತಿಳಿದುಬಂದಿದೆ.

ಕೆಲವು ದಿನಗಳಿಂದ ಭೀಮಾಶಂಕರ ಮತ್ತು ಮಹಿಳೆ ಪ್ರೀತಿಸುತ್ತಿದ್ದರು. ಆಬಳಿಕ ಮಹಿಳೆಗೆ ಮೊದಲೇ ಮದುವೆಯಾಗಿದೆ ಎಂದು ಗೊತ್ತಾಗಿದೆ. ಈ ಕಾರಣದಿಂದಾಗಿ ಮಹಿಳೆಯಿಂದ ಅಂತರ ಕಾಯ್ದುಕೊಳ್ಳಲು ಭೀಮಾಶಂಕರ ಮುಂದಾಗಿದ್ದಾನೆ.

ಅಲ್ಲದೇ ತಾನು ವಾಸವಾಗಿದ್ದ ಬಾಡಿಗೆ ರೂಮ್ ಅನ್ನು ಮಹಿಳೆಗೆ ಬಿಟ್ಟು ಕೊಟ್ಟಿದ್ದಾನೆ. ಈ ನಡುವೆ ಬೇರೆ ಯುವತಿಯೊಂದಿಗೆ ಭೀಮಾಶಂಕರನಿಗೆ ಮದುವೆ ಗೊತ್ತಾಗಿದೆ. ಊರಲ್ಲಿ ಮದುವೆಯಾಗಿ ಭೀಮಾಶಂಕರ ಪುನಃ ಬೆಂಗಳೂರಿಗೆ ಬಂದಿದ್ದಾನೆ.

ಮೇ 25 ರಂದು ಸಂಜೆ ಮಾತನಾಡಬೇಕಿದೆ ಎಂದು ಮಹಿಳೆ ಆತನನ್ನು ರೂಮಿಗೆ ಕರೆಸಿಕೊಂಡಿದ್ದಾಳೆ.



ಮಹಿಳೆ ಬಳಿ ಮದುವೆಯಾದ ವಿಚಾರವನ್ನು ಭೀಮಾಶಂಕರ ಪ್ರಸ್ತಾಪಿಸಿದ್ದಾನೆ. ಸೈಲೆಂಟಾಗಿ ಬಿಸಿ ನೀರು ಕಾಯಿಸಿದ ಮಹಿಳೆ ಆತನಿಗೆ ಗೊತ್ತಾಗದಂತೆ ಮುಖಕ್ಕೆ ಬಿಸಿ ನೀರು ಎರಚಿದ್ದಾಳೆ. ಬಿಯರ್ ಬಾಟಲಿಯಿಂದ ಮುಖಕ್ಕೆ ಹೊಡೆದು ರೂಮ್ ಲಾಕ್ ಮಾಡಿಕೊಂಡು ಪರಾರಿಯಾಗಿದ್ದಾಳೆ.

ತೀವ್ರವಾಗಿ ಗಾಯಗೊಂಡು ಕಿರುಚಾಡುತ್ತಿದ್ದ ಭೀಮಾಶಂಕರನನ್ನು ಮನೆ ಮಾಲೀಕ ಸೈಯ್ಯದ್ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿದ್ದಾರೆ. ಭೀಮಾಶಂಕರನ ದೇಹದ ಮೇಲೆ ಶೇ. 50 ರಷ್ಟು ಸುಟ್ಟ ಗಾಯಗಳಾಗಿದ್ದು, ಚಾಮರಾಜಪೇಟೆ ಠಾಣೆ ಪೊಲೀಸರಿಗೆ ದೂರು ನೀಡಿದ್ದಾನೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿ ಮಹಿಳೆಗಾಗಿ ಹುಡುಕಾಟ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

# ಚಿಕ್ಕಮಗಳೂರು: ನಾಗರಹಾವು ಕಚ್ಚಿ ಉರಗ ತಜ್ಞ ಸ್ನೇಕ್ ನರೇಶ್ ಸಾವು



ಚಿಕ್ಕಮಗಳೂರು: ಚಿಕ್ಕಮಗಳೂರಿನಲ್ಲಿ ನಾಗರಹಾವು ಕಚ್ಚಿ ಉಗರ ತಜ್ಞ ಸ್ನೇಕ್ ನರೇಶ್ ಮೃತಪಟ್ಟಿದ್ದಾರೆ. ಸ್ನೇಕ್ ನರೇಶ್ ಅವರು ಸ್ವತಃ ತಾವು ಹಿಡಿದು ಬ್ಯಾಗ್‌ನಲ್ಲಿ ಇಟ್ಟಿದ್ದ ಹಾವು ಕಚ್ಚಿ ಸಾವನ್ನಪ್ಪಿದ್ದಾರೆ.

ಮೃತ 51 ವರ್ಷದ ಸ್ನೇಹ ನರೇಶ್ ಅವರು ಚಿಕ್ಕಮಗಳೂರಿನಲ್ಲಿ ನೂರಾರು ಹಾವುಗಳನ್ನು ಹಿಡಿದು ಜನರಿಗೆ ಜಾಗೃತಿ ಮೂಡಿಸುತ್ತಿದ್ದರು. ಆದರೆ ದುರ್ವಿಧಿ ಅವರು ಹಿಡಿದು ಬ್ಯಾಗ್ ನಲ್ಲಿಟ್ಟ ಹಾವೇ ಅವರನ್ನು ಕಚ್ಚಿದ್ದು ಸಾವನ್ನಪ್ಪಿದ್ದಾರೆ.

ನರೇಶ್ ಅವರು ಇಂದು ಬೆಳಗ್ಗೆ ನಾಗರಹಾವೊಂದನ್ನು ರಕ್ಷಣೆ ಮಾಡಿ ತಂದಿದ್ದರು. ನಂತರ ಮತ್ತೊಂದು ಹಾವಿನ ರಕ್ಷಣೆಗೆ ಕರೆ ಬಂದಿದ್ದು, ಈ ವೇಳೆ ಬೈಕಿನ ಸ್ಕೂಟಿಯಲ್ಲಿದ್ದ ಹಾವಿನ ಚೀಲದ ಗಂಟು ಬಿಗಿ ಮಾಡಲು ಡಿಕ್ಕಿ ಓಪನ್ ಮಾಡಿದ ವೇಳೆ ನಾಗರಹಾವು ನರೇಶ್ ಅವರನ್ನು ಕಚ್ಚಿತ್ತು.

ಹಾವು ಕಚ್ಚಿದ ಪರಿಣಾಮ ನರೇಶ್ ಅವರು ತೀವ್ರ ಅಸ್ವಸ್ಥರಾಗಿದ್ದರು. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸುವ ಪ್ರಯತ್ನ ಮಾಡಿದರು ಅದು ಫಲ ನೀಡಲಿಲ್ಲ.

# ಗೋವಾ–ದೆಹಲಿ ವಿಮಾನದಲ್ಲಿ ಪ್ರಯಾಣಿಕನಿಂದ ಏರ್ ಇಂಡಿಯಾ ಸಿಬ್ಬಂದಿಗೆ ಥಳಿತ

ನವದೆಹಲಿ: ಕಳೆದ ಕೆಲವು ತಿಂಗಳುಗಳಲ್ಲಿ ವಿಮಾನಗಳಲ್ಲಿ ಪ್ರಯಾಣಿಕರು ಅಸಭ್ಯವಾಗಿ ವರ್ತಿಸುವ ಮೂಲಕ ಇತರ ಜನರಿಗೆ ತೊಂದರೆ ನೀಡುವ ಇಂತಹ ಅನೇಕ ಪ್ರಕರಣಗಳು ಮುನ್ನೆಲೆಗೆ ಬಂದಿವೆ. ಏರ್ ಇಂಡಿಯಾದ ಗೋವಾ–ದೆಹಲಿ ವಿಮಾನದಲ್ಲಿ ಅಂತಹ ಒಂದು ಪ್ರಕರಣ ಕಂಡುಬಂದಿದೆ.

ನಿನ್ನೆ ಗೋವಾದಿಂದ ದೆಹಲಿಗೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನದಲ್ಲಿ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದ ಪುರುಷ ಪ್ರಯಾಣಿಕರೊಬ್ಬರನ್ನು ದೆಹಲಿ ವಿಮಾನ ನಿಲ್ದಾಣದಲ್ಲಿ ಇಳಿದ ನಂತರ ಭದ್ರತಾ ಸಿಬ್ಬಂದಿಗೆ ಹಸ್ತಾಂತರಿಸಲಾಗಿದೆ ಎಂದು ವಿಮಾನಯಾನ ಸಂಸ್ಥೆ ಈ ಕುರಿತು ಮಾಹಿತಿ ನೀಡಿದೆ.

ಏರ್ ಇಂಡಿಯಾ ವಕ್ತಾರರು ಹೇಳುವಂತೆ, ಪ್ರಯಾಣಿಕರೊಬ್ಬರು ಸಿಬ್ಬಂದಿಯನ್ನು ನಿಂದಿಸಿದ್ದು ಅಲ್ಲದೆ ಅವರಲ್ಲಿ ಒಬ್ಬರ ಮೇಲೆ ಹಲ್ಲೆ ಮಾಡಿದ್ದಾರೆ. ದೆಹಲಿ ವಿಮಾನ ನಿಲ್ದಾಣದಲ್ಲಿ ಇಳಿದ ನಂತರವೂ ಸಹ ಪ್ರಯಾಣಿಕರು ಅಶಿಸ್ತಿನ ವರ್ತನೆಯನ್ನು ಮುಂದುವರೆಸಿದ್ದು ಆತನನ್ನು ಭದ್ರತಾ ಸಿಬ್ಬಂದಿಗೆ ಒಪ್ಪಿಸಲಾಯಿತು. ಘಟನೆ ಬಗ್ಗೆ ನಿಯಂತ್ರಕರಿಗೆ ಮಾಹಿತಿ ನೀಡಿದ್ದೇವೆ ಎಂದರು.

ನಮ್ಮ ಸಿಬ್ಬಂದಿ ಮತ್ತು ಪ್ರಯಾಣಿಕರ ಸುರಕ್ಷತೆಯು ನಮಗೆ ಅತ್ಯಂತ ಮಹತ್ವದ್ದಾಗಿದೆ. ಪ್ರಯಾಣಿಕನ ಈ ಅಶಿಸ್ತಿನ ವರ್ತನೆಯನ್ನು ನಾವು ಬಲವಾಗಿ ಖಂಡಿಸುತ್ತೇವೆ. ಸಂತ್ರಸ್ತ ಸಿಬ್ಬಂದಿ ಸದಸ್ಯರಿಗೆ ನಾವು ಸಾಧ್ಯವಿರುವ ಎಲ್ಲ ನೆರವು ನೀಡುತ್ತೇವೆ. ಎಪ್ರಿಲ್ 10ರಂದು ದೆಹಲಿ–ಲಂಡನ್ ವಿಮಾನದಲ್ಲಿ ಇಬ್ಬರು ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತವಾಗಿ



ವರ್ತಿಸಿದ್ದಕ್ಕಾಗಿ ಏರ್ ಇಂಡಿಯಾ ಪುರುಷನನ್ನು ಎರಡು ವರ್ಷಗಳ ಕಾಲ ಅಮಾನತುಗೊಳಿಸಿದ್ದು ಅಲ್ಲದೆ ಪ್ರಯಾಣವನ್ನು ನಿಷೇಧಿಸಲಾಗಿದೆ.

ನಿಯಮಗಳ ಪ್ರಕಾರ, ಪ್ರಯಾಣಿಕರ ಇಂತಹ ನಡವಳಿಕೆಯನ್ನು ಮೂರು ಹಂತಗಳಲ್ಲಿ ವರ್ಗೀಕರಿಸಲಾಗಿದೆ. ದೈಹಿಕ ಸನ್ನೆಗಳು, ಮೌಖಿಕ ನಿಂದನೆ ಮತ್ತು ಆಲ್ಕೋಹಾಲ್ ನಶೆಯಂತಹ ಅಶಿಸ್ತಿನ ನಡವಳಿಕೆಯನ್ನು ಹಂತ 1 ಎಂದು ವರ್ಗೀಕರಿಸಲಾಗಿದೆ. ಆದರೆ ದೈಹಿಕವಾಗಿ ನಿಂದಿಸುವ ನಡವಳಿಕೆಗಳಾದ ತಳ್ಳುವುದು, ಒದೆಯುವುದು ಅಥವಾ ಲೈಂಗಿಕ ಕಿರುಕುಳವನ್ನು ಹಂತ 2 ಎಂದು ವರ್ಗೀಕರಿಸಲಾಗಿದೆ.

ವಿಮಾನ ನ್ಯಾವಿಗೇಷನ್ ಸಿಸ್ಟಮ್‌ಗಳನ್ನು ಹಾನಿಗೊಳಿಸುವುದು. ಕತ್ತು ಹಿಸುಕುವುದು ಮತ್ತು ಕೊಲ್ಲುವ ಉದ್ದೇಶದಿಂದ ಹಲ್ಲೆಯಂತಹ ದೈಹಿಕ ಹಿಂಸೆಯಂತಹ ಮಾರಣಾಂತಿಕ ನಡವಳಿಕೆಯನ್ನು ಹಂತ 3 ಎಂದು ಪರಿಗಣಿಸಲಾಗುತ್ತದೆ.

ಅಶಿಸ್ತಿನ ನಡವಳಿಕೆಯ ಮಟ್ಟವನ್ನು ಅವಲಂಬಿಸಿ, ಸಂಬಂಧಿತ ಏರ್‌ಲೈನ್‌ನಿಂದ ರಚಿಸಲಾದ ಆಂತರಿಕ ಸಮಿತಿಯು ಅಶಿಸ್ತಿನ ನಡವಳಿಕೆಯ ತಪ್ಪಿತಸ್ಥ ಪ್ರಯಾಣಿಕರನ್ನು ವಿಮಾನಯಾನದಿಂದ ನಿಷೇಧಿಸುವ ಅವಧಿಯನ್ನು ನಿರ್ಧರಿಸಲಾಗುತ್ತದೆ.

# ವಿವಿಧ ಶೋರೂಮ್ ಗಳಲ್ಲಿ ಕಳ್ಳರ ಕೈಚಳಕ ಸಿಸಿಟಿವಿಯಲ್ಲಿ ಸೆರೆ

ವಿಜಯಪುರ: ನಗರದ ಕಾರ ಶೋರೂಮ್‌ಗಳಲ್ಲಿ ಕಳ್ಳರ ಕೈಚಳಕ, ಸರಣಿಗಳ್ಳತನ ಮಾಡಿದ್ದಾರೆ ಅದರಂತೆ ನಿನ್ನೆ ತಡರಾತ್ರಿ ವಿವಿಧ ಶೋರೂಮ್‌ಗಳಲ್ಲಿ ಕಳ್ಳತನ ಮಾಡಿದ ಖದೀಮರು ವಿಜಯಪುರ ನಗರದ ಬೆಂಗಳೂರು ರಸ್ತೆಯಲ್ಲಿರುವ ವಿವಿಧ ಶೋರೂಮ್‌ಗಳಲ್ಲಿ ಕಳ್ಳತನ ಮಾಡಿದ್ದಾರೆ

ಹುಂಡೈ, ಕಿಯಾ, ಟೊಯೋಟಾ, ಆರ್‌ಎಸ್ ಮೋಟರ್ಸ್ ಸೇರಿದಂತೆ ವಿವಿಧ ಕಡೆ ಖದೀಮರ ಕೈ ಚಳಕ ತೋರಿಸಿದ್ದಾರೆ.



ಶೋರೂಮ್‌ನಲ್ಲಿ ಕೈಗೆ ಸಿಕ್ಕಷ್ಟು ಹಣದೋಚಿ ಪರಾರಿಯಾದ ಖದೀಮರು ಅಷ್ಟೇ ಅಲ್ಲದೆ ಸಿಸಿಟಿವಿ ಇದ್ದಕಡೆ ಸಂಚರಿಸಿ ಅವುಗಳನ್ನು ಕೂಡಾ ಕಿತ್ತಿ ಹಾಕಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ, ಘಟನೆ ಕುರಿತು ಆರೋಪಿತರ ಪತ್ತೆಗೆ ಜಾಲ ಬೀಸಿದ ಪೊಲೀಸರು ವಿಜಯಪುರ ನಗರ ಠಾಣೆ ವ್ಯಾಪ್ತಿಯಲ್ಲಿ ನಡೆದ ಘಟನೆ ನಡೆದಿದೆ.

# ನೋಡಲ್ ಅಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಜಿಲ್ಲಾ ನಗರಾಭಿವೃದ್ಧಿ ಕೋಶದಲ್ಲಿ ಖಾಲಿ ಇರುವ ಒಂದು ನೋಡಲ್ ಅಧಿಕಾರಿ ಹುದ್ದೆಗೆ ಅಭ್ಯರ್ಥಿಯನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವದು.

ಈ ನೇಮಕಾತಿ ತಾತ್ಕಾಲಿಕವಾಗಿದ್ದು 12 ತಿಂಗಳ ಅವಧಿಗೆ ಸೀಮಿತವಾಗಿರುತ್ತದೆ ಹಾಗೂ ಹೊರಗುತ್ತಿಗೆ ಮೂಲಕ ಮಾತ್ರ ಪಡೆದುಕೊಳ್ಳಲಾಗುತ್ತದೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಬಿ.ಇ (ಸಿ.ಎಸ್/ಐ.ಟಿ) ಅಥವಾ ಎಂ.ಸಿ.ಎ ವಿದ್ಯಾರ್ಹತೆಯನ್ನು ಹೊಂದಿರಬೇಕು.

ಸಂದರ್ಶನವನ್ನು ಜೂನ್ 07 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಜಿಲ್ಲಾ ನಗರಾಭಿವೃದ್ಧಿ ಕೋಶದಲ್ಲಿ ನಡೆಸಲಾಗುವದು.

ಆಸಕ್ತ ಅಭ್ಯರ್ಥಿಗಳು ವಿದ್ಯಾರ್ಹತೆಯ ದಾಖಲೆಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಹೆಚ್ಚಿನ ಮಾಹಿತಿ ಅವಶ್ಯಕವಿದ್ದಲ್ಲಿ ಕಚೇರಿ ಸಮಯದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಕಚೇರಿ ವ್ಯವಸ್ಥಾಪಕರನ್ನು ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ಧಾರವಾಡ: 2023 ನೇ ಸಾಲಿಗೆ ಐ.ಟಿ.ಐ ಪ್ರವೇಶ ಬಯಸುವವರು www:cite.karnataka.gov.in ಮುಖಾಂತರ ಅಥವಾ ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆಗಳಲ್ಲಿಯೂ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ದಾಸ್ತಿಕೊಪ್ಪ. ಕಲಘಟಗಿಯಲ್ಲಿ ಆನ್ಲೈನ್ ಮುಖಾಂತರ ಲಭ್ಯವಿರುವ ವೃತ್ತಿಗಳು. ಫಿಟ್ಟರ್, ಇ.ಎಂ. ಎಂ.ಇ.ವಿ ಮತ್ತು ಐ.ಆರ್ಡಿ.ಎಂ.ಟಿ ಹಾಗೂ ಆಫ್ಲೈನ್ ಪಿ.ಪಿ.ಪಿ.ಯೋಜನೆಯಲ್ಲಿ ಫಿಟ್ಟರ್, ಇಲೆಕ್ಟ್ರೀಷಿಯನ್ ಮತ್ತು ವೆಲ್ಡರ್ ವೃತ್ತಿಗಳಲ್ಲಿ ಸೀಟುಗಳು ಲಭ್ಯವಿವೆ.

ಮಾಹಿತಿಗಾಗಿ ಪ್ರಾಚಾರ್ಯರು ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ, ದಾಸ್ತಿಕೊಪ್ಪ. ಕಲಘಟಗಿ (9844480235) ಇವರನ್ನು ಸಂಪರ್ಕಿಸಬಹುದು ಎಂದು ಪ್ರಾಚಾರ್ಯರು ತಿಳಿಸಿದ್ದಾರೆ.

## ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದಲ್ಲಿ NICDIT ಸಭೆ

# ಕೆಜಿಎಫ್ ನಲ್ಲಿ ಕೈಗಾರಿಕಾ ಕಾರಿಡಾರ್: ಉನ್ನತ ಪ್ರಾಧಿಕಾರಕ್ಕೆ ಸಚಿವ ಎಂ.ಬಿ ಪಾಟೀಲ್ ಕೋರಿಕೆ

ಬೆಂಗಳೂರು: ಕೆಜಿಎಫ್ ನಲ್ಲಿ ಬಿ ಇ ಎಂ ಎಲ್ ಗೆ ಸೇರಿದ 3,600 ಎಕರೆ ಜಾಗದಲ್ಲಿ ಕೈಗಾರಿಕಾ ಕಾರಿಡಾರ್ ನಿರ್ಮಿಸುವ ಬಗ್ಗೆ ಪರಿಗಣಿಸಬೇಕು ಎಂದು ರಾಜ್ಯದ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಅವರು ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಉನ್ನತ ಪ್ರಾಧಿಕಾರವನ್ನು ಮಂಗಳವಾರ ಕೋರಿದರು.




ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಮತ್ತು ಅನುಷ್ಠಾನ ಟ್ರಸ್ಟ್ ನ (ಓಖಅ–ಆಖಖ) ಉನ್ನತಮಟ್ಟದ ಮೇಲ್ವಿಚಾರಣಾ ಪ್ರಾಧಿಕಾರದ ಸಭೆಯಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡು ಮಾತನಾಡಿದ ಸಂದರ್ಭದಲ್ಲಿ ಈ ಮನವಿ ಮಾಡಿದರು.

ಶೀಘ್ರವೇ ಈ ಸಂಬಂಧ ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರವು ಪ್ರಸ್ತಾವ ಸಲ್ಲಿಸಲಿದೆ. ಈ ಕಾರ್ಯಯೋಜನೆ ಜಾರಿಯಾದರೆ ಇದು ಚೆನ್ನೈ– ಬೆಂಗಳೂರು ಕೈಗಾರಿಕಾ ಕಾರಿಡಾರ್ ನ ಪ್ರಮುಖ ವಲಯಗಳಲ್ಲಿ ಒಂದಾಗುವ ಜೊತೆಗೆ ಹೆಚ್ಚಿನ ಉದ್ಯೋಗಗಳನ್ನು ಸೃಷ್ಟಿಸಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪಾಟೀಲ್ ಅವರು ಮಾಡಿದ ಈ ಪ್ರಸ್ತಾಪಕ್ಕೆ ಸಭೆಯಲ್ಲಿ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ ಅವರು ಇದಕ್ಕೆ ಸಂಬಂಧಿಸಿದ ವಿವರಗಳೊಂದಿಗೆ ಪ್ರಸ್ತಾವ ಸಲ್ಲಿಸುವಂತೆ ಸಭೆಯಲ್ಲಿದ್ದ ಕೇಂದ್ರ ಸಚಿವರು ಪಾಟೀಲ್ ಅವರಿಗೆ ಸೂಚಿಸಿದರು.

ಚೆನ್ನೈ– ಬೆಂಗಳೂರು ಕೈಗಾರಿಕಾ ಕಾರಿಡಾರ್ ತುಮಕೂರು ನೋಡ್ ಬಗ್ಗೆ ತಿಳಿಸಿ, ಇಲ್ಲಿ 1,736 ಎಕರೆ ವಿಸ್ತೀರ್ಣದಲ್ಲಿ ಮೊದಲ ಹಂತದಲ್ಲಿನ ಅಭಿವೃದ್ಧಿ ಕೆಲಸಗಳನ್ನು ಎಲ್ ಅಂಡ್ ಟಿ ಸಂಸ್ಥೆಗೆ ಗುತ್ತಿಗೆ ವಹಿಸಲಾಗಿದೆ. ಇದಕ್ಕಾಗಿ 948 ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದರು.

ಬೆಂಗಳೂರು–ಮುಂಬೈ ಕೈಗಾರಿಕಾ ಕಾರಿಡಾರ್ ಧಾರವಾಡ ನೋಡ್ ಬಗ್ಗೆ ಮಾತನಾಡಿ, 6,042 ಎಕರೆ ಜಾಗಕ್ಕಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಈ ಪೈಕಿ, 2000 ಎಕರೆ ಜಾಗಕ್ಕೆ ಅಂತಿಮ ಅಧಿಸೂಚನೆ ಹೊರಡಿಸಲು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಪಾಟೀಲ್ ವಿವರಿಸಿದರು.

ಈ ಮೇಲಿನ ಯೋಜನೆಗಳಿಗೆ ಸಂಬಂಧಿಸಿದಂತೆ ಭೂಸ್ವಾಧೀನ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಲು ಸರ್ಕಾರ ಒತ್ತು ನೀಡಲಿದೆ ಎಂದೂ ಹೇಳಿದರು.

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್, ಕೇಂದ್ರ ಬಂದರು ಸಚಿವ ಸರಬಾನಂದ ಸೋನೋವಾಲ, ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಕೈಗಾರಿಕಾ ಸಚಿವರು ಸಭೆಯಲ್ಲಿ ಭಾಗವಹಿಸಿದ್ದರು.

ಕರ್ನಾಟಕ ಸರ್ಕಾರದ ಪರವಾಗಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್ ಸೆಲ್ವಕುಮಾರ್, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ ಮತ್ತಿತರ ಉನ್ನತ ಅಧಿಕಾರಿಗಳು ವರ್ಚ್ಯುಯಲ್ ಸಭೆಯಲ್ಲಿ ಪಾಲ್ಗೊಂಡಿದ್ದರು.

# ಸರ್ಕಾರದ ಜನಕಲ್ಯಾಣ ಯೋಜನೆಗಳಿಗೆ ಬ್ಯಾಂಕುಗಳು ತಕ್ಷಣವೇ ಸ್ಪಂದಿಸಲಿ: ಜಿಲ್ಲಾಧಿಕಾರಿ ಗುರುದತ್ತ ಹೆಗಡೆ

ಧಾರವಾಡ: ಕೇಂದ್ರ ಹಾಗೂ ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ವಿವಿಧ ಜನಕಲ್ಯಾಣ ಯೋಜನೆಗಳಿಗೆ ಬ್ಯಾಂಕ್ ಅಧಿಕಾರಿಗಳು ಆಧ್ಯತೆ ಮೇರೆಗೆ ಸ್ಪಂದಿಸಬೇಕು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಹೇಳಿದರು.

ಅವರು ಇಂದು (ಮೇ.30) ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಸಲಹಾ ಹಾಗೂ ಪ್ರಗತಿ ಸಮಿತಿ ಹಾಗೂ ಜಿಲ್ಲಾಮಟ್ಟದ ಬ್ಯಾಂಕರುಗಳ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2022–23ನೇ ಸಾಲಿನ ಜಿಲ್ಲಾ ಬ್ಯಾಂಕುಗಳ ನಾಲ್ಕನೇ ತ್ರೈಮಾಸಿಕ ಅಂತ್ಯಕ್ಕೆ ಒಟ್ಟು 15258.75 ಕೋಟಿ ರೂ. ಸಾಲವನ್ನು ವಿತರಣೆ ಮಾಡಲಾಗಿದ್ದು, ಶೇ.98 ಗುರು ಸಾಧಿಸಲಾಗಿದೆ. 1819.39 ಕೋಟಿ ಬೆಳೆಸಾಲ, 1844.76 ಕೋಠಿ ಕೃಷಿ ಅವಧಿ ಸಾಲ, 3664–15 ಕೃಷಿ ಸಾಲ, 4161 ಕೋಟಿ ಸೂಕ್ಷ್ಮ ಸಣ್ಣ ಮಧ್ಯಮ ಉದ್ಯಮಗಳ ಸಾಲ, 8452 ವಿವಿಧ ಆದ್ಯತಾ ವಲಯದ ಸಾಲ, 6806 ಆದ್ಯತಾ ರಹಿತ ಸಾಲವನ್ನು ವಿತರಣೆ ಮಾಡಲಾಗಿದೆಯೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವಿವಿಧ ಬ್ಯಾಂಕ್ಗಳಲ್ಲಿ ಬಾಕಿಯಿರುವ ವಿವಿಧ ಇಲಾಖೆಗಳ ಹಾಗೂ ಅಭಿವೃದ್ಧಿ ನಿಗಮಗಳ ಅರ್ಜಿಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಲಾಯಿತು. ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಪ್ರಭುದೇವ ಅವರು ಈ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಗ್ರಾಮೀಣ ಅಭಿವೃದ್ಧಿ ಮತ್ತು ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ರೂಟ್ಸೆಟ್) ಯ ವಾರ್ಷಿಕ ಗುರಿಯನ್ನು 800 ರಿಂದ 1000 ಫಲಾನುಭವಿಗಳಿಗೆ



ವಿಸ್ತರಿಸಲು ಹಾಗೂ ಹೊಸದಾದ ಕಾರ್ಯಕ್ರಮಣ್ಣು ಹಮ್ಮಿಕೊಳ್ಳಲು ಸೂಚಿಸಿದರು. ಹಾಗೂರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ಎಲ್ಲ ಫಲಾನುಭವಿಗಳ ಖಾತೆಗಳಿಗೆ ಆಧಾರ್ ಸಂಖ್ಯೆಯನ್ನು ಜೋಡಿಸಿ ಫಲಾನುಭವಿಗಳಿಗೆ ಪ್ರೇತ್ಸಾಹ ಧನವನ್ನು ಪಡಿಯಲು ಸಹಕರಿಸಬೇಕೆಂದು ಬ್ಯಾಂಕರಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ಅಗ್ರಣೀಯ ಬ್ಯಾಂಕಿನ ಎಲ್ಡಿಎಮ್ ಪ್ರಭುದೇವ್ ಎನ್.ಜಿ. ಅವರು ಮಾತನಾಡಿ, ವಾಣಿಜ್ಯ ಬ್ಯಾಂಕ್ಗಳು ಶೇ.96ರಷ್ಟು, ಕೆ.ವಿ.ಜಿ ಬ್ಯಾಂಕ್ ಶೇ. 86ರಷ್ಟು, ಕೆ.ಸಿ.ಸಿ ಬ್ಯಾಂಕ್ ಶೇ.159ರಷ್ಟು, ಕೆ.ಎಸ್,ಕಾರ್ಡ ಶೇ. 23ರಷ್ಟು ಮತ್ತು ಕೆ.ಎಸ್.ಎಫ್.ಸಿ ಶೇ. 7ರಷ್ಟು ಸಾಧನೆ ಮಾಡಿರುತ್ತವೆ ಎಂದು ಹೇಳಿದರು.

ತಾಲ್ಲೂಕುವಾರು ಸಾಧನೆಯಲ್ಲಿ ಧಾರವಾಡ ಪ್ರಥಮ ಸ್ಥಾನದಲ್ಲಿದ್ದರೆ, ಹುಬ್ಬಳ್ಳಿ ನಗರ ದ್ವಿತೀಯ ಸ್ಥಾನದಲ್ಲಿದೆ. ಹಾಗೆ ಇನ್ನುಳಿದ ತಾಲ್ಲೂಕುಗಳು ಕಲಘಟಗಿ, ಹುಬ್ಬಳ್ಳಿ ಗ್ರಾಮಾಂತರ, ನವಲಗುಂದ, ಅಣ್ಣಿಗೇರಿ ಮತ್ತು ಕುಂದಗೋಳ ನಂತರದ ಸ್ಥಾನಗಳಲ್ಲಿರುತ್ತವೆ ಎಂದರು.

ಜಿಲ್ಲೆಯಲ್ಲಿ ಮಾರ್ಚ್ 2023 ರ ಅಂತ್ಯಕ್ಕೆ ದುರ್ಬಲ ವರ್ಗದವರಿಗೆ ಒಟ್ಟು ರೂ. 4305.67ಕೋಟಿ ಸಾಲ ವಿತರಣೆ ಆಗಿರುತ್ತದೆ. ಮತ್ತು ಮಹಿಳೆಯರಿಗೆ ರೂ.3789.62ಕೋಟಿ ಸಾಲವನ್ನು ವಿತರಿಸಲಾಗಿದೆ. ಹಾಗೂ ಅಲ್ಪ ಸಂಖ್ಯಾತರಿಗೆರೂ. 1483.06ಕೋಟಿ ಸಾಲ ವಿತರಣೆ ಆಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

ಭಾರತ ಸರ್ಕಾರದ ಪ್ರಮುಖ ಕಾರ್ಯಕ್ರಮ ಪಿಎಂಜೆಡಿವೈ, ಖಾತೆ ತೆರೆಯುವ ಪ್ರಗತಿ ಜಿಲ್ಲೆಯಲ್ಲಿ ಉತ್ತಮವಾಗಿದೆ ಹಾಗೂ ಈಗಾಗಲೇ ಶೇ.68ರಷ್ಟು ಖಾತೆದಾರರಿಗೆ ರೂಪೇ ಎಟಿಎಂ ಕಮ್ಡೆಬಿಟ್ಕಾರ್ಡ್ಗಳನ್ನು ವಿತರಿಸಲಾಗಿದೆ ಎಂದರು.

ಜನಸುರಕ್ಷಾ ಸಾಚೂರೇಶನ ಕಾಂಪೇನ್ 1ನೇ ಏಪ್ರಿಲ್ 2023 ರಿಂದ 30ನೇ ಜೂನ್ 2023 ವರೆಗೆ ಜಾರಿಯಲ್ಲಿದ್ದು ಗ್ರಾಮ ಪಂಚಾಯತ್ ಮಟ್ಟದಲ್ಲಿ ಸರ್ಕಾರಿ ಇಲಾಖೆಯವರು ಹಾಗೂ ಬ್ಯಾಂಕರ್ಗಳ ಸಮನ್ವಯದಲ್ಲಿ ಶಿಬಿರಗಳು ನಡೆಯುತ್ತಾ ಇದ್ದು ಅರ್ಹ ಫಲಾನುಭವಿಗಳು ಪ್ರಧಾನಮಂತ್ರಿ ವಿಮಾ ಯೋಜನೆಗಳಾದ ಪಿಎಂಎಸ್ಬಿವೈ ಮತ್ತು ಪಿಎಂಜೆಜೆಬಿವೈ ಗಳಲ್ಲಿ ದಾಖಲಸಿಕೊಳ್ಳಬೇಕೆಂದು ಹೇಳಿದರು.

ಆರ್ಬಿ.ಐ ಅಧಿಕಾರಿ ಮಲಯ ಬಿಸ್ವಾಸ್ ಮಾತನಾಡಿ, ಆರ್ಥಿಕ ಸಾಕ್ಷರತಾ ಕೌನ್ಸಿಲರ್ (ಎಫ್–ಎಲ್ಸಿ) ಇರದಂತಹ ತಾಲುಕೂಗಳಲ್ಲಿ ಸಂಭಂಧಪಟ್ಟ ಬ್ಯಾಂಕಗಳು ಬೇಗನೆ ಎಫ್‌ಎಲ್ಸಿಯುಗಳ ನೇಮಕಾತಿ ಮಾಡಬೇಕೆಂದು ಸೂಚಿಸಿದರು ಹಾಗೂ ದೇಶದಲ್ಲಿ ಡಿಜಿಟಲ್ ಪಾವತಿ ಪರಿಸರ ವ್ಯವಸ್ಥೆಯನ್ನು ಆಳವಾಗಿಸಲು, ಆರ್ಬಿಐ ಪ್ರಾಯೋಗಿಕ ಕಾರ್ಯಕ್ರಮದಡಿಯಲ್ಲಿ ಧಾರವಾಡ ಜಿಲ್ಲೆಯನ್ನು ಆಯ್ಕೆ ಮಾಡಿದ್ದು, ಜಿಲ್ಲೆಯಲ್ಲಿ ಬ್ಯಾಂಕಿನ ವ್ಯವಹಾರಗಳು ಶೇ.100 ಡಿಜಿಟಲೀಕರಣ ಗೊಳಿಸಲು 30ನೇ ಸೆಪ್ಟೆಂಬರ್ ವರೆಗೆ ಗಡವು ಕೊಡಲಾಗಿದೆ. ಈ ನಿಟ್ಟಿನಲ್ಲಿ ಬ್ಯಾಂಕರಗಳನ್ನು ನಿಗದಿತ ಅವಧಿಯೊಳಗಾಗಿ ಎಲ್ಲ ಬ್ಯಾಂಕಿಂಗ್ ವ್ಯವಹಾರಗಳನ್ನು ಡಿಜಿಟಲೀಕರಿಸುವ ಕಾರ್ಯವನ್ನು ಪೂರ್ಣಗೊಳಿಸಲು ಸೂಚಿಸಿದರು

ಪಿಎಂಎಂವೈ (ಪಿಎಂ ಮುದ್ರಾ ಯೋಜನೆ) ಯೋಜನೆಯಡಿ, ಹೆಚ್ಚಿನ ಫಲಾನುಭವಿಗಳನ್ನು ಸಾಲ ನೀಡಲು ಗುರುತಿಸಬೇಕೆಂದು ಬ್ಯಾಂಕುಗಳಿಗೆ ತಿಳಿಸಲಾಯಿತು. ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ರೇಖಾ ಡೊಳ್ಳಿನ, ನಬಾರ್ಡ್ ಅಧಿಕಾರಿ ಮಯೂರ ಕಾಂಬಳೆ, ಬ್ಯಾಂಕ್ ಆಫ್ ಬರೋಡಾ ಪ್ರಾದೇಶಿಕ ಮುಖ್ಯಸ್ಥ ಬಸವರಾಜ ಬೆಲ್ಲದ ಹಾಗೂ ಜಿಲ್ಲಾಮಟ್ಟದ ಎಲ್ಲ ಬ್ಯಾಂಕುಗಳ ವ್ಯವಸ್ಥಾಪಕರು ಸಭೆಯಲ್ಲಿ ಉಪಸ್ಥಿತರಿದ್ದರು.

# ಕುಡಿಯುವ ನೀರು; ಆರೋಗ್ಯ, ಶಿಕ್ಷಣ, ಕೃಷಿಗೆ ಆದ್ಯತೆ

# ಬಿತ್ತನೆ ಬೀಜ ವಿತರಣೆ ಆರಂಭಿಸಲು ಸಚಿವ ಸತೀಶ್ ಜಾರಕಿಹೊಳಿ ಸೂಚನೆ

ಬೆಳಗಾವಿ: ಮಳೆಗಾಲ ಆರಂಭಗೊಳ್ಳುತ್ತಿರುವುದರಿಂದ ಜಿಲ್ಲೆಯಲ್ಲಿ ಇಂದಿನಿಂದಲೇ ಎಲ್ಲ ಸ್ಥಳೀಯ ಶಾಸಕರ ಗಮನಕ್ಕೆ ತಂದು ಅವರ ಜತೆಗೂಡಿ ರೈತರಿಗೆ ಬೀಜ–ಗೊಬ್ಬರ ವಿತರಣೆ ಕಾರ್ಯವನ್ನು ಆರಂಭಿಸಬೇಕು ಎಂದು ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಜಿಲ್ಲೆಯ ಅಭಿವೃದ್ಧಿ ಕುರಿತು ಸುವರ್ಣ ವಿಧಾನಸೌಧದಲ್ಲಿ ಮಂಗಳವಾರ (ಮೇ 30) ನಡೆದ ಎಲ್ಲ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೀಜ ಖರೀದಿಗೆ ರೈತರು ದೂರ ಅಲೆಯುವುದನ್ನು ತಪ್ಪಿಸಲು ಆದಷ್ಟು ಸಮೀಪದಲ್ಲಿ ಬೀಜ ಲಭಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಹಾರ ಬಾಕಿ ಇದ್ದರೆ ಕೂಡಲೇ ಬಿಡುಗಡೆ ಮಾಡಬೇಕು. ಆತ್ಮಹತ್ಯೆ ವರದಿಯಾದ ಕೂಡಲೇ ಮರಣೋತ್ತರ ಪರೀಕ್ಷೆ ನಡೆಸಿ ಪರಿಹಾರ ಬಿಡುಗಡೆಗೊಳಿಸಬೇಕು. ಈ ನಿಟ್ಟಿನಲ್ಲಿ ತಹಶೀಲ್ದಾರರು ಹಾಗೂ ಸಂಬಂಧಿಸಿದ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು ಎಂದು ತಿಳಿಸಿದರು.

ವಿಪತ್ತು ಸಂದರ್ಭದಲ್ಲಿ ಯಾವುದೇ ಜಾನುವಾರುಗಳು ಮೃತಪಟ್ಟಾಗ ಅವುಗಳ ಮಾಲೀಕರಿಗೆ ಅಧಿಕಾರಿಗಳು ಸ್ವತಃ ಮನೆಗೆ ತೆರಳಿ ಪರಿಹಾರ ವಿತರಿಸಬೇಕು.

ಪರಿಹಾರ ಪಡೆಯುವ ಪ್ರಕ್ರಿಯೆ ಗೊತ್ತಿಲ್ಲದಿರುವುದರಿಂದ ಅನೇಕ ಜನರು ಪರಿಹಾರ ಪಡೆಯಲು ಮುಂದಾಗುತ್ತಿಲ್ಲ. ಆದ್ದರಿಂದ ಅಧಿಕಾರಿಗಳೇ ಆಸಕ್ತಿ ವಹಿಸಿ ಪರಿಹಾರ ನೀಡಬೇಕು.

ಶಾಲೆಗಳು ಆರಂಭಗೊಳ್ಳುತ್ತಿರುವುದ–ರಿಂದ ಅತಿಥಿ ಶಿಕ್ಷಕರ ನೇಮಕ ಪ್ರಕ್ರಿಯೆ ಆರಂಭಿಸಬೇಕು ಎಂದು ಸೂಚನೆ ನೀಡಿದರು. ಶಿಥಿಲಗೊಂಡಿರುವ ಶಾಲಾ ಕಟ್ಟಡಗಳನ್ನು ತೆರವುಗೊಳಿಸಬೇಕು ಎಂದು ಹೇಳಿದರು. ಜಿಲ್ಲೆಯ ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅಗತ್ಯ ಔಷಧಿಗಳ ದಾಸ್ತಾನು ಇರಬೇಕು.

ಬೆಳಗಾವಿಯ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗೆ ಅಗತ್ಯವಿರುವ ಯಂತ್ರೋಪಕರಣಗಳನ್ನು ಒದಗಿಸಿ ಆದಷ್ಟು ಬೇಗನೇ ಉದ್ಘಾಟನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಅತೀ ಹೆಚ್ಚು ಬಿಪಿಎಲ್ ಕಾರ್ಡು ಇರುವ ಕಡೆಗಳಲ್ಲಿ ಪಡಿತರ ಅಂಗಡಿ ಆರಂಭಿಸಲು ಪರವಾನಿಗೆ ನೀಡಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಕಾಮಗಾರಿ ವಿಳಂಬವಾದಷ್ಟು ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುತ್ತದೆ. ಆದ್ದರಿಂದ ಯಾವುದೇ ಕಾರಣಕ್ಕೂ ಕಾಮಗಾರಿಗಳು



ವಿಳಂಬಗೊಳ್ಳಬಾರದು. ಅಧಿಕಾರಿಗಳು ನಿರಂತರ ನಿಗಾವಹಿಸಿ ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸಚಿವ ಜಾರಕಿಹೊಳಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳಗಾವಿ ನಗರದ ಕುಡಿಯುವ ನೀರು ಪೂರೈಕೆ ಸೇರಿದಂತೆ ಇತರೆ ಪ್ರಮುಖ ವಿಷಯಗಳ ಕುರಿತು ಪ್ರತ್ಯೇಕವಾಗಿ ಸಭೆ ನಡೆಸಿ ಅಗತ್ಯವಿರುವ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಹೊಸ ಸರಕಾರದ ಆಶಯದ ಪ್ರಕಾರ ಅಧಿಕಾರಿಗಳು ಕೆಲಸ ಮಾಡಬೇಕು. ಜನರಿಗೆ ಉತ್ತಮ ಆಡಳಿತ ನೀಡಬೇಕು ಎಂಬುದು ಸರಕಾರದ ಆದ್ಯತೆಯಾಗಿದೆ. ಅಧಿಕಾರಿಗಳು ಚುರುಕಿನಿಂದ ಕೆಲಸ ಮಾಡಬೇಕು.

ಕ್ರಿಯಾಶೀಲ ಅಧಿಕಾರಿಗಳಿಗೆ ಕೆಲಸ ಮಾಡಲು ಪ್ರೋತ್ಸಾಹ ನೀಡಲಾಗುವುದು ಎಂದು ಸಚಿವರಾದ ಸತೀಶ್ ಜಾರಕಿಹೊಳಿ ಭರವಸೆ ನೀಡಿದರು.

ಸಭೆಯಲ್ಲಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು, ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಕುಟುಂಬಗಳಿಗೆ ಪರಿಹಾರ ಬಿಡುಗಡೆಗೆ ಸಂಬಂಧಿಸಿದಂತೆ ಕೆಲವು ತಾಂತ್ರಿಕ ಕಾರಣಗಳು ಅಡ್ಡಿಯಾಗುತ್ತಿದ್ದು, ಇಂತಹ ಸಂದರ್ಭಗಳಲ್ಲಿ ತ್ವರಿತವಾಗಿ ಕ್ರಮವಾಗಬೇಕು ಎಂದರು.

ಹನಿ ನೀರಾವರಿ ಯೋಜನೆಯ ಫಲಾನುಭವಿಗಳ ಆಯ್ಕೆ ಸಂದರ್ಭದಲ್ಲಿ ಆಯಾ ಮತಕ್ಷೇತ್ರದ ಶಾಸಕರ ಗಮನಕ್ಕೆ ತಂದು ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು ಎಂದರು. ಉದ್ಯೋಗ ಖಾತ್ರಿ ಯೋಜನೆಯಡಿ ಮಾಡುವ ಕೆಲಸವು ರೈತರಿಗೆ ಉಪಯೋಗವಾಗಬೇಕು.

ಶಾಲೆಗಳು ಆರಂಭಗೊಳ್ಳುತ್ತಿರುವುದ–ರಿಂದ ಅಗತ್ಯವಿರುವ ಶಾಲೆಗಳಿಗೆ ಡೆಸ್ಕ್ ಮತ್ತಿತರ ಪೀಠೋಪಕರಣಗಳನ್ನು ಒದಗಿಸಬೇಕು ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸಚಿವರ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ತಿಗೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸಿ ಮಾಹಿತಿಯನ್ನು ನೀಡಿದರೆ ಸರಕಾರದ ಮಟ್ಟದಲ್ಲಿ ಅನುಮೋದನೆ ಪಡೆದುಕೊಳ್ಳಲಾಗುವುದು ಎಂದು ಹೇಳಿದರು.

ಸಾಂಬ್ರಾದಲ್ಲಿ 3500 ಬಿಪಿಎಲ್ ಕಾರ್ಡುದಾರರಿದ್ದು, ಹೆಚ್ಚುವರಿ ಪಡಿತರ ಅಂಗಡಿ ಆರಂಭಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂಗನವಾಡಿ ಕೇಂದ್ರಗಳ ಸ್ಥಾಪನೆಗೆ ನಿವೇಶನ ಅಗತ್ಯವಿರುವ ಮಾಹಿತಿಯನ್ನು ಕೂಡಲೇ ಪಡೆದುಕೊಂಡು ತಕ್ಷಣವೇ ನಿವೇಶನ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಕಂದಾಯ, ಗ್ರಾಮೀಣಾಭಿವೃದ್ಧಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಜಂಟಿ ಸಭೆ ನಡೆಸಿ ಅಂಗನವಾಡಿ ಕೇಂದ್ರ ಸ್ಥಾಪನೆಗೆ ನಿವೇಶನ ಒದಗಿಸಬೇಕು ಎಂದರು. ಸಂಭವನೀಯ ಪ್ರವಾಹ ನಿರ್ವಹಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಹೇಳಿದರು.

ಚಂದನ ಹೊಸೂರ, ಬೆಕ್ಕಿನಕೇರಿ, ಬೆನಕನಹಳ್ಳಿ ಸೇರಿದಂತೆ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಅಧಿಕಾರಿಗಳು ಟ್ಯಾಂಕರ್ ಮೂಲಕ ಕುಡಿಯುವ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಜನರು ಸರಕಾರದ ಮೇಲೆ ಇಟ್ಟಿರುವ ನಿರೀಕ್ಷೆ ನಾವು ಈಡೇರಿಸಬೇಕಿದೆ. ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಅಧಿಕಾರಿಗಳಿಗೆ ತಿಳಿಸಿದರು.

ಬೈಲಹೊಂಗಲ ಶಾಸಕರಾದ ಮಹಾಂತೇಶ್ ಕೌಜಲಗಿ ಅವರು, ಪಿಕೆಪಿಎಸ್ ಮೂಲಕ ಬಿತ್ತನೆ ಬೀಜ ವಿತರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸಿಡಿಲು ಬಡಿದು ರೈತರ ಬಣಿವೆ ಸುಟ್ಟಾಗ ನೈಸರ್ಗಿಕ ವಿಪತ್ತು ಮಾರ್ಗಸೂಚಿಯಡಿ ಕೂಡಲೇ ಪರಿಹಾರ ಬಿಡುಗಡೆ ಮಾಡಬೇಕು ಎಂದು ಸೂಚನೆ ನೀಡಲು ಸಚಿವರನ್ನು ಒತ್ತಾಯಿಸಿದರು.

ರೇಷ್ಮೆ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯನ್ನು ಬೆಳಗಾವಿಯಿಂದ ಹಾವೇರಿ ಜಿಲ್ಲೆಗೆ ಸ್ಥಳಾಂತರಿಸಲಾಗಿದೆ. ಆದ್ದರಿಂದ ಜಂಟಿ ನಿರ್ದೇಶಕರ ಕಚೇರಿಯನ್ನು ಮತ್ತೆ ಬೆಳಗಾವಿಗೆ ಸ್ಥಳಾಂತರಿಸಬೇಕು ಎಂದು ಸಭೆಯಲ್ಲಿ ಒತ್ತಾಯಿಸಿದರು.

ನೇಮಕಗೊಂಡ ಅತಿಥಿ ಶಿಕ್ಷಕರನ್ನು ನಿಯೋಜಿಸುವಾಗ ಶಿಕ್ಷಕರ ಕೊರತೆ ಇರುವ ಗ್ರಾಮೀಣ ಪ್ರದೇಶಗಳ ಶಾಲೆಗಳಿಗೆ ಆದ್ಯತೆ ನೀಡಬೇಕು ಎಂದು ಶಾಸಕ ಮಹಾಂತೇಶ್ ಕೌಜಲಗಿ ಹೇಳಿದರು.

ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳು ಸೇರಿದಂತೆ ಒಟ್ಟಾರೆ 170 ಕೇಂದ್ರಗಳ ಮೂಲಕ ಬಿತ್ತನೆ ಬೀಜ ವಿತರಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ತೋಟಗಾರಿಕೆ ಇಲಾಖೆಯ ಯಾವುದೇ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಮಾಡುವಾಗ ಜಿಲ್ಲಾಧಿಕಾರಿ ಅಧ್ಯಕ್ಷತೆಯ ಸಮಿತಿಯ ಮೂಲಕವೇ ಮಾಡಬೇಕು ಎಂದರು

ಬೆಳಗಾವಿ ಉತ್ತರ ಶಾಸಕರಾದ ಆಸಿಫ್(ರಾಜು) ಸೇಠ್, ಶಿಕ್ಷಕರ ಕೊರತೆ ಇರುವ ಕಡೆಗಳಲ್ಲಿ ಕೂಡಲೇ ಅತಿಥಿ ಶಿಕ್ಷಕರನ್ನು ಭರ್ತಿ ಮಾಡಬೇಕು ಎಂದು ಒತ್ತಾಯಿಸಿದರು.

ಕುಡಚಿ ಶಾಸಕರಾದ ಮಹೇಂದ್ರ ತಮ್ಮಣ್ಣವರ, ರಾಯಬಾಗ ಶಾಸಕರಾದ ದುರ್ಯೋಧನ ಐಹೊಳೆ, ಸವದತ್ತಿ ಶಾಸಕರಾದ ವಿಶ್ವಾಸ್ ವೈದ್ಯ, ಕಿತ್ತೂರು ಶಾಸಕರಾದ ಬಾಬಾಸಾಹೇಬ್ ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ್ ಹಟ್ಟಿಹೊಳಿ, ಡಾ.ಸಾಬಣ್ಣ ತಳವಾರ ಸಭೆಯಲ್ಲಿ ಉಪಸ್ಥಿತರಿದ್ದರು.

## ನೂತನ ಸಚಿವರಿಗೆ ಜಿಲ್ಲಾಡಳಿತದಿಂದ ಸನ್ಮಾನ



ನೂತನ ಸಚಿವರಾದ ಶ್ರೀ ಸತೀಶ್ ಜಾರಕಿಹೊಳಿ ಹಾಗೂ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹಾಗೂ ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ ಅವರು ಜಿಲ್ಲಾಡಳಿತದ ಪರವಾಗಿ ಸನ್ಮಾನಿಸಿದರು.

ಇದೇ ವೇಳೆ ಎಲ್ಲ ಶಾಸಕರನ್ನು ಕೂಡ ಜಿಲ್ಲಾಡಳಿತ ಪರವಾಗಿ ಶಾಲು ಹೊದಿಸಿ ಸಸಿಗಳನ್ನು ವಿತರಿಸಿ ಸನ್ಮಾನಿಸಲಾಯಿತು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಡಿಸಿಪಿ ಸ್ನೇಹಾ ಸೇರಿದಂತೆ ಎಲ್ಲ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಅವಂತ್ರಾ ಬೈ ಟ್ರೆಂಡ್ಸ್ ನಿಂದ ಸಾಂಪ್ರದಾಯಿಕ ದಿರಿಸುಗಳ ಮಹಾಸಂಗಮ

ಬೆಳಗಾವಿ: ಮದುವೆ ಋತುವಿಗೆ ಸಾಂಪ್ರದಾಯಿಕ ದಿರಿಸುಗಳನ್ನೂ ಈಗ ಅವಂತ್ರಾ ಬೈ ಟ್ರೆಂಡ್ಸ್ ದಿಂದಲೇ ಆರಿಸಿಕೊಳ್ಳಬಹುದು. ಏಕೆಂದರೆ ರಿಲಯನ್ಸ್ ರೀಟೇಲ್ ನಿಂದ ಹೆಣ್ಣುಮಕ್ಕಳಿಗಾಗಿಯೇ ಹೊರ ತರುತ್ತಿರುವ ಸಾಂಪ್ರದಾಯಿಕ ದಿರಿಸುಗಳ ಬ್ರ್ಯಾಂಡ್ ಅವಂತ್ರಾ ಬೈ ಟ್ರೆಂಡ್ಸ್. ಭಾರತದಲ್ಲಿ ಸಾಂಪ್ರದಾಯಿಕ ಬಟ್ಟೆಗಳ ಖರೀದಿ ವ್ಯಾಖ್ಯಾನವನ್ನೇ ಇದು ಬದಲಿಸಿದೆ.

2021ರ ಸೆಪ್ಟೆಂಬರ್ ನಲ್ಲಿ ಅನಾವರಣಗೊಂಡಂಥ ಇದು, ಎರಡು ವರ್ಷದ ಒಳಗಾಗಿ




ಹನ್ನೊಂದು ರಾಜ್ಯಗಳ ಮೂವತ್ತು ನಗರಗಳಲ್ಲಿ ಐವತ್ತಕ್ಕೂ ಹೆಚ್ಚು ಮಳಿಗೆಗಳನ್ನು ಹೊಂದಿದೆ. ಈ ಬ್ರ್ಯಾಂಡ್ ವಿಶೇಷ ಏನೆಂದರೆ ಅಖಿಲ ಭಾರತ ಮಟ್ಟದಲ್ಲಿ ಸಣ್ಣ ಮತ್ತು ದೊಡ್ಡ ಎರಡೂ ಮಾರುಕಟ್ಟೆಯಲ್ಲಿ ಅದ್ಭುತವಾಗಿ ಕಾರ್ಯ ನಿರ್ವಹಿಸುತ್ತಿದೆ.

ಮದುವೆ ಆಗಿರಲಿ, ಹಬ್ಬ– ಹರಿದಿನ ಇರಲಿ ಅಥವಾ ಕಚೇರಿಗಳಿಗೆ, ಕೆಲಸದ ಸಲುವಾಗಿ ಹೋಗುವಾಗ ಮತ್ತು ಯಾವುದೇ ಸಾಮಾನ್ಯ ಸಂದರ್ಭಕ್ಕೂ ಒಪ್ಪುವಂಥ ಬಟ್ಟೆಗಳನ್ನು ಇಲ್ಲಿ ನೀವು ಕೊಳ್ಳಬಹುದು. ಸೀರೆ, ಬ್ಲೌಸ್ ಗಳು, ಲೆಹೆಂಗಾ, ಡ್ರೆಸ್ ಮಟೀರಿಯಲ್ ಗಳು, ಕುರ್ತಾಗಳು, ಇತರ ಪರಿಕರಗಳು ಮತ್ತು ಸ್ವಂತ ಬ್ರ್ಯಾಂಡ್ ನಲ್ಲಿಯೇ ಗ್ರಾಹಕರ ಬೇಕಾದ ರೀತಿಯಲ್ಲಿ ಸೇವೆಗಳು ದೊರೆಯುತ್ತವೆ.

ಮದುವೆ ಸಂದರ್ಭಕ್ಕೆ ವಧುವಿನ ಆಯ್ಕೆಗೆ ಕಾಂಜೀವರಂನಿಂದ ಬನಾರಸ್ ಸೀರೆ ತನಕ, ಪೈಥಾಣಿ ಯಿಂದ ಬಾಂಧನಿ ತನಕ ಸೀರೆಗಳ ಅದ್ಭುತ ಸಂಗ್ರಹವನ್ನು ಅವಂತ್ರಾ ಬೈ ಟ್ರೆಂಡ್ಸ್ ದಲ್ಲಿ ನೋಡಬಹುದು, ಕೊಳ್ಳಬಹುದು.

ಅವಂತ್ರಾ ಬೈ ಟ್ರೆಂಡ್ಸ್ ಮಳಿಗೆಯೊಳಗೆ ನಡೆದುಬಂದರೆ ಸಂಸ್ಕೃತಿ ಮತ್ತು ಆಧುನಿಕ ದಿನಮಾನ ಆರಾಮದಾಯಕ ಅನುಭವ ಕಟ್ಟಿಕೊಡುವ ಮೂಲಕ ಮದುವೆಯಂಥ ಜೀವನದ ಪ್ರಮುಖ ಘಟನಾವಳಿಯನ್ನು ಮತ್ತಷ್ಟು ಸ್ಮರಣೀಯವಾಗಿಸುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶ: ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ, ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆನ್ ಲೈನ್ (ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರಕಾರದ ಕಾರ್ಯದರ್ಶಿ ತುಲಸಿ ಮದ್ದಿನೇನಿ ಅವರು ತಿಳಿಸಿದ್ದಾರೆ.

ಈ ಇಲಾಖೆಗಳ ವಿದ್ಯಾರ್ಥಿನಿಲಯಗಳಲ್ಲಿ 5ನೇ ತರಗತಿಯಿಂದ 10ನೇ ತರಗತಿಯವರೆಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ತಮ್ಮ SATS I ಆಯೊಂದಿಗೆ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ ವಿಳಾಸ: https://shp.karnataka.gov.in/ ಇಲ್ಲಿ ಸಂದರ್ಶಿಸಿ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಕೊನೆಯ ದಿನ ಜೂ.15 ಆಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ವಿಶೇಷ ಸೂಚನೆ: ವಿದ್ಯಾರ್ಥಿಗಳು 2023–24ನೇ ಸಾಲಿನಲ್ಲಿ ಬೇರೆ ಶಾಲೆಗಳಿಗೆ ಪ್ರವೇಶ ಪಡೆದಿದ್ದರೆ ಸದರಿ ವಿದ್ಯಾರ್ಥಿಗಳ SATS ID ಯನ್ನು ಪ್ರಸಕ್ತ ಶಾಲೆಯಲ್ಲಿ, ಸಂಬಂಧಿಸಿದ ಮಾಹಿತಿಯನ್ನು ಇಂಧೀಕರಿಸಿ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆಯರಿಗೆ ಉಚಿತ ಪ್ರಯಾಣ ಕುರಿತು ಸಿಎಂಗೆ ವರದಿ: ಸಾರಿಗೆ ಸಚಿವ ರೆಡ್ಡಿ



ಬೆಂಗಳೂರು: 'ಮಹಿಳೆ ಯರಿಗೆ ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಉಚಿತ ಪ್ರಯಾಣ ನೀಡುವ ಬಗ್ಗೆ ಹಾಗೂ ಅದಕ್ಕೆ ತಗುಲುವ ವೆಚ್ಚದ ಬಗ್ಗೆ ವರದಿ ಸಿದ್ಧವಾಗಿದೆ. ಬುಧವಾರ ಮಧ್ಯಾಹ್ನ ಮುಖ್ಯಮಂತ್ರಿ ಅವರಿಗೆ ವರದಿ ಸಲ್ಲಿಸಲಾಗುವುದು' ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕಾಂಗ್ರೆಸ್ ಗ್ಯಾರಂಟಿಗಳು ಖಂಡಿತ ಈಡೇರುತ್ತವೆ.

ಮಹಿಳೆಯರಿಗೆ ಬಸ್ ಪ್ರಯಾಣ ಉಚಿತವೆಂದು ಹೇಳಿದ್ದೇವೆ. ಅದನ್ನು ಈಡೇರಿಸುತ್ತೇವೆ' ಎಂದರು.

ಉಚಿತ ಪ್ರಯಾಣದ ಅನುಕೂಲ ಹಾಗೂ ಅನನುಕೂಲ ಬಗ್ಗೆ ಅಧಿಕಾರಿಗಳು ವಿಸ್ತೃತ ವರದಿ ಸಿದ್ಧಪಡಿಸಿದ್ದಾರೆ. ಕೆಎಸ್ ಆರ್‌ಟಿಸಿ, ಬಿಎಂಟಿಸಿ, ವಾಯುವ್ಯ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ನಿಗಮಗಳಿಂದ ಮಾಹಿತಿ ಪಡೆಯಲಾಗಿದೆ.

ಎಷ್ಟು ಮಹಿಳೆಯರು ಓಡಾಡುತ್ತಾರೆ. ಅದಕ್ಕೆ ತಗುಲುವ ವೆಚ್ಚ ಎಷ್ಟು ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ವರದಿಯಲ್ಲಿದೆ' ಎಂದು ತಿಳಿಸಿದರು.

ಗುರುವಾರ ಸಚಿವ ಸಂಪುಟ ಸಭೆ ನಡೆಯಲಿದೆ. ಅಲ್ಲಿಯೂ ಗ್ಯಾರಂಟಿ ಬಗ್ಗೆ ಚರ್ಚರಯಾಗಿ,ಘೋಷಣೆ ಆಗುವ ಸಾಧ್ಯತೆ ಇದೆ' ಎಂದೂ ಅವರು ಹೇಳಿದರು.

## ಯಮಕನಮರಡಿಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅದ್ದೂರಿ ರೋಡ್ ಶೋ

ಯಮಕನಮರಡಿ: ಯಮಕನಮರಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ನಾವು ಸದಾ ಸಿದ್ಧ, ಯಮಕನಮರಡಿ ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿ ಪಥದಲ್ಲಿ ಮುನ್ನಡೆಸಲು ನಿಮ್ಮ ಬೆಂಬಲ ಮತ್ತು ವಿಶ್ವಾಸ ಸದಾ ಇರಲಿ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕರ್ನಾಟಕ ಸರ್ಕಾರದ ಸಂಪುಟ ದರ್ಜೆಯ ಲೋಕೋಪಯೋಗಿ ಇಲಾಖೆಯ ಸಚಿವರಾಗಿ ಯಮಕನಮರಡಿಗೆ ಪ್ರಥಮ ಬಾರಿಗೆ ಆಗಮಿಸಿದ ಹಿನ್ನೆಲೆಯಲ್ಲಿ ಯಮಕನಮರಡಿಯಲ್ಲಿ ಹಮ್ಮಿಕೊಂಡಿದ್ದ ಅದ್ದೂರಿ ಸ್ವಾಗತ ಸಮಾರಂಭ, ರೋಡ್ ಶೋ ನಲ್ಲಿ ಪಾಲ್ಗೊಂಡು ನಂತರ ನಡೆದ ವೇದಿಕೆ ಸಭೆಯಲ್ಲಿ ಅವರು ಮಾತನಾಡಿದರು.

ನಾವು ಅಭಿವೃದ್ಧಿ ಮುಂದಿಟ್ಟುಕೊಂಡು ಚುನಾವಣೆ ಎದುರಿಸಿ ಜಯಗಳಿಸಿದ್ದೇವೆ,



ಬಿಜೆಪಿಯ ವರಂತೆ ಚುನಾವಣೆಯಲ್ಲಿ ಗೆಲ್ಲಲು ಸುಳ್ಳು ಹೇಳಲಿಲ್ಲ.

ಹೀಗಾಗಿ ಜನ ನಮ್ಮನ್ನು ನಂಬಿ ಆಯ್ಕೆ ಮಾಡಿದ್ದು, ಮುಂಬರುವ ದಿನಗಳಲ್ಲಿ ಅಭಿವೃದ್ಧಿಯನ್ನು ಇನ್ನಷ್ಟು ಚುರುಕುಗೊಳಿಸಲಾಗುವುದು ಎಂದು ತಿಳಿಸಿದರು.

ಕಳೆದ 15 ವರ್ಷಗಳ ಅವಧಿಯಲ್ಲಿ ಕ್ಷೇತ್ರದಲ್ಲಿ ಕುಡಿಯಲು ನೀರು, ರಸ್ತೆಗಳು ಸೇರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಿದ್ದೇವೆ ಎಂದ ಅವರು, ನನ್ನನ್ನು 57 ಸಾವಿರ ಮತಗಳ ಅಂತರದಿಂದ ಗೆಲ್ಲಿಸಿದ ಕ್ಷೇತ್ರದ ಜನರಿಗೆ, ಕಾರ್ಯಕರ್ತರಿಗೆ ಹಾಗೂ ಅಭಿಮಾನಿಗಳಿಗೆ ಕೃತಜ್ಞತೆ ಸಲ್ಲಿಸಿದರು.

2018ರ ವಿಧಾನಸಭೆ ಚುನಾವಣೆಯಲ್ಲಿ ನಾನು ಕ್ಷೇತ್ರಕ್ಕೆ ಪ್ರಚಾರಕ್ಕೆ ಬರಲಿಲ್ಲ. 103 ಬೂತ್ ಗಳಲ್ಲಿ ಹಿನ್ನಡೆಯಾದರೂ ಜಯಗಳಿಸಿದ್ದೆ, ಈ ಭಾರಿ 52 ಬೂತ್ ಗಳಲ್ಲಿ ಹಿನ್ನಡೆಯಾಗಿದೆ.

1 ಲಕ್ಷಕ್ಕೂ ಅಧಿಕ ಮತ ಪಡೆದು 57 ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದೇನೆ. ಮುಂದಿನ ಚುನಾವಣೆಯಲ್ಲಿ ಗೆಲುವಿನ ಅಂತರ ಇನ್ನಷ್ಟು ಹೆಚ್ಚಳವಾಗಬೇಕೆಂದು ತಿಳಿಸಿದರು.

ವಿರೋಧಿಗಳು ಇದ್ದಾಗ ಮಾತ್ರ ರಾಜಕೀಯಕ್ಕೆ ಒಂದು ಅರ್ಥ ಬರುತ್ತದೆ. ವಿರೋಧಿಗಳು ಇಲ್ಲದೇ ಹೋದರೆ ಕಾರ್ಯಕರ್ತರು ಮನೆಯಲ್ಲಿ ಮಲಗುತ್ತಾರೆ. ಬಿಜೆಪಿಯವರು ನಮ್ಮನ್ನು ಸೋಲಿಸುತ್ತೇನೆ ಸೋಲಿಸುತ್ತೇನೆ ಎಂದು ಪದೇ ಪದೇ ಹೇಳಿದ್ದ–ರಿಂದ ಕಾರ್ಯಕರ್ಯರು ಎಚ್ಚರಗೊಂಡು ಹೆಚ್ಚಿನ ಮತ ನೀಡಿ ಗೆಲ್ಲಿಸಿದ್ದಾರೆ ಎಂದರು.

ಯವ ನಾಯಕ ರಾಹುಲ್ ಜಾರಕಿಹೊಳಿ ಮಾತನಾಡಿ, ನಿಮ್ಮ ಆಶೀರ್ವಾದದಿಂದ ತಂದೆ ಸತೀಶ್ ಜಾರಕಿಹೊಳಿ ಅವರು 57 ಸಾವಿರ ಅಂತರದಿಂದ ಗೆಲುವು ಸಾಧಿಸಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ದೀನ ದಲಿತರ, ಹಿಂದುಳಿದವರ, ರೈತರ, ಕಾರ್ಮಿಕರ ಪ್ರಗತಿಗೆ ಶ್ರಮಿಸಲಾಗುವುದು ಎಂದು ತಿಳಿಸಿದರು.

## ಅಕ್ರಮ ಅರಣ್ಯ ಒತ್ತುವರಿದಾರರ ವಿರುದ್ಧ ಕ್ರಮ: ಈಶ್ವರ ಖಂಡ್ರೆ



ಸಿದ್ದಗಂಗೆ, ಮೇ 30: ಅರಣ್ಯ ಪ್ರದೇಶದಲ್ಲಿನ ಸಣ್ಣ ಹಿಡುವಳಿದಾರರನ್ನು ಒಕ್ಕಲಿಬ್ಬಿಸದೆ ಅರಣ್ಯ ಭೂಮಿ ಸಂರಕ್ಷಣೆಗೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅರಣ್ಯ ಪರಿಸರ ಮತ್ತು ಜೀವಿ ಶಾಸ್ತ್ರ ಸಚಿವ ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ತುಮಕೂರು ಬಳಿಯ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಗದ್ದುಗೆಯ ದರ್ಶನ ಪಡೆದು, ಶ್ರೀಗಳ ಆಶೀರ್ವಾದ ಪಡೆದ ಬಳಿಕ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದ ಅವರು ಕಂದಾಯ ಇಲಾಖೆ ಅರಣ್ಯ ಇಲಾಖೆ ಜಂಟಿಯಾಗಿ ಸಮೀಕ್ಷೆ ನಡೆಸಿದ ಬಳಿಕ ಈ ಸಮಸ್ಯೆಗೆ ಪರಿಹಾರ ದೊರಕಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಉಸಿರಾಡುವ ಗಾಳಿ ಕುಡಿಯುವ ನೀರು ಕಲುಷಿತವಾದರೆ ವಿಷವಾದರೆ ಬದುಕುವುದು ಹೇಗೆ?ಎಂದು ಪ್ರಶ್ನಿಸಿದ ಅವರು ತಮಗೆ ದೊರೆತಿರುವ ಈ ಖಾತೆಯಲ್ಲಿ ದಕ್ಷ ಪ್ರಾಮಾಣಿಕವಾಗಿ ಕೆಲಸ ಮಾಡಿ ಮುಂದಿನ ಪೀಳಿಗೆ ಸ್ಮರಿಸುವಂತಹ ಕಾರ್ಯ ಮಾಡುವುದಾಗಿ ಭರವಸೆ ನೀಡಿದರು.

ಅನ್ನ, ಜ್ಞಾನ, ಅಕ್ಷರ ದಾಸೋಹದ ತಾಣವಾದ ಮಠಕ್ಕೆ ಆಗಮಿಸಿದಾಗ ಮನಸ್ಸಿಗೆ ಶಾಂತಿ ನೆಮ್ಮದಿ ಸಿಗುತ್ತದೆ.

ಪೂಜ್ಯರ ಪ್ರೇರಣೆ ಪಡೆದು, ಸರ್ವರಿಗೂ ಲೇಸನ್ನೇ ಬಯಸುವ ಬಸವಾದಿ ಪ್ರಮಥ–'ರ ಹಿತವಚನದಂತೆ ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟವಾಗಿ ಪರಿವರ್ತಿಸಿ, ರಾಜ್ಯವನ್ನು ಪ್ರಗತಿಪಥದಲ್ಲಿ ಕೊಂಡೊಯ್ಯುವ ಕಾರ್ಯ ಮಾಡಲಾಗುವುದು ಎಂದರು.

## ಪಂಚಾಯಿತಿ ಮಟ್ಟದಲ್ಲಿ ನವೋದಯ ಮಾದರಿ ಉನ್ನತ ಗುಣಮಟ್ಟದ ಶಾಲೆ ಆರಂಭ: ಡಿಕೆ.ಶಿವಕುಮಾರ್



ಬೆಂಗಳೂರು: ರಾಜ್ಯದ ಪ್ರತಿ ಪಂಚಾಯತಿ ಮಟ್ಟದಲ್ಲಿಯೂ ನವೋದಯ ಮಾದರಿ ಉನ್ನತ ಗುಣಮಟ್ಟದ ಶಾಲೆಯ ಆರಂಭಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ತಾವು ಓದಿದ ರಾಜಾಜಿನಗರದ ನ್ಯಾಷನಲ್ ಪಬ್ಲಿಕ್ ಶಾಲೆಗೆ ಸೋಮವಾರ ಭೇಟಿ ನೀಡಿದ ಅವರು, ತಮ್ಮ ಶಿಕ್ಷಕ ಗೋಪಾಲಕೃಷ್ಣ ಅವರನ್ನು ಭೇಟಿ ಮಾಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಂಚಾಯಿತಿ ಮಟ್ಟದಲ್ಲಿ ನವೋದಯ ಮಾದರಿ ಉನ್ನದ ಗುಣಮಟ್ಟದ ಶಾಲೆಗಳ ಆರಂಬಿಸಲು ಚಿಂತನೆಗಲು ನಡೆಯುತ್ತಿವೆ. ಈ ಕುರಿತು ಚುನಾವಣಾ ಪ್ರಣಾಳಿಕೆಯಲ್ಲಿಯೂ ತಿಳಿಸಿದ್ದೆವು.

ಈ ನಿಟ್ಟಿನಲ್ಲಿ ನಾನು ಪರಮೇಶ್ವರ್ ಹಾಗೂ ಪ್ರಾಥ–'ಮಿಕ ಶಿಕ್ಷಣ ಸಚಿವರ ಜೊತೆಗೆ ಸಮಗ್ರ ಚರ್ಚೆ ನಡೆಸುತ್ತೇವೆ. ಮಾಜಿ ಶಿಕ್ಷಕರಿಂದಲೂ ಸಲಹೆಗಳನ್ನು ಪಡೆಯುತ್ತೇವಂದು ಹೇಳಿದರು.

ಮೇ 31 ರಿಂದ ವಿದ್ಯಾರ್ಥಿಗಳಿಗೆ ಸಿಹಿ ನೀಡುವ ಮೂಲಕ ಶಾಲೆಗಳು ಪ್ರಾರಂಭ: ಶಿಕ್ಷಣ ಸಚಿವ ಮಧು ಬಂಗಾರಪ್ಪ

ಗುಣಮಟ್ಟದ ಶಿಕ್ಷಣವನ್ನು ಪಡೆಯಲು ಮಕ್ಕಳು ತಮ್ಮ ಹಳ್ಳಿಗಳಿಂದ ನಗರಗಳಿಗೆ ವಲಸೆ ಹೋಗಬಾರದು ಎಂಬುದನ್ನು ಖಚಿತಪಡಿಸಿಕೊಳ್ಳಲು ಇಂತಹ ಶಾಲೆಗಳನ್ನು ಆರಂಭಿಸಲು ಚಿಂತನೆಗಳ ನಡೆಸಲಾಗುತ್ತಿದೆ. 'ಹಳ್ಳಿ ಜನರಿಗೂ ಕೂಡ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂಬ ಹಂಬಲವಿದೆ.

ಎಲ್ಲ ಮಕ್ಕಳಿಗೂ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುವಂತೆ ಮಾಡಬೇಕು.

ಇದು ನಮ್ಮ ಸರ್ಕಾರದ ಆದ್ಯತೆ" ಎಂದು ತಿಳಿಸಿದರು. ಇದೇ ವೇಳೆ ಕಾಂಗ್ರೆಸ್ ಪ್ರಣಾಳಿಕೆ ಭರವಸೆ ಜಾರಿ ಅಸಾಧ್ಯ ಎಂಬ ವಿರೋಧ ಪಕ್ಷಗಳ ನಾಯಕರ ಹೇಳಿಕೆ ಪ್ರತಿಕ್ರಿಯಿಸಿದ ಅವರು, "ಯಾವುದೇ ಊಹಾಪೋಹಗಳ ಅಗತ್ಯವಿಲ್ಲ.

ಚರ್ಚೆ ಮಾಡುವವರಿಗೆ, ಟೀಕೆ ಮಾಡುವವರಿಗೆ, ಸಲಹೆ ನೀಡುವವರಿಗೆ ಬೇಡ ಎನ್ನಲು ಸಾಧ್ಯವಿಲ್ಲ. ಮಾತನಾಡುವವರು, ಟೀಕೆ ಮಾಡುವವರು ಮಾಡಲಿ. ನಾವು ಕೆಲಸ ಮಾಡಿ ಉತ್ತರ ನೀಡುತ್ತೇವೆ" ಎಂದು ತಿರುಗೇಟು ನೀಡಿದರು.



## ತುರ್ತು ಭೂಸ್ಪರ್ಶ ಮಾಡಿದ ವಿಮಾನ: ಇಬ್ಬರು ಪಾರು

ಬೆಳಗಾವಿ: ತಾಲ್ಲೂಕಿನ ಹೊನ್ನಿಹಾಳ ಹೊರವಲಯದಲ್ಲಿ ಮಂಗಳವಾರ ತಾಂತ್ರಿಕ ತೊಂದರೆಯಿಂದ ತರಬೇತಿ ವಿಮಾನ ತುರ್ತು ಭೂಸ್ಪರ್ಶ ಮಾಡಿದೆ.

ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಸಾಂಬ್ರಾ ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ.

ರೆಡ್‌ಬರ್ಡ್ ಸಂಸ್ಥೆಗೆ ಸೇರಿದ ವಿಟಿ–ಆರ್ ಬಿಎಫ್ ತರಬೇತಿ ವಿಮಾನ ಸಾಂಬ್ರಾ ವಿಮಾನ ನಿಲ್ದಾಣದಿಂದ ಹೊರಟಿತ್ತು. ಇದರಲ್ಲಿ ಇಬ್ಬರು ಪ್ರಯಾಣಿಸುತ್ತಿದ್ದರು. ಈ ಕುರಿತು ಮಾರಿಹಾಳ ಠಾಣೆ ಪೊಲೀಸರು ಸ್ಥಳ ಪರಿಶೀಲನೆ ನಡೆಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089